ಮಂಗಳವಾರ, 23.12.2025
ಬೆಂಗಳೂರು, ಬೆಲೆ: 5ರೂ,
2 ಪುಟಗಳು
ಸಂಪುಟ 01 - ಸಂಚಿಕೆ 110
Digital Varthe Kannada Daily
Volume 01 - Issue 110
Tuesday 23.12.2025
Price: 5/- Rs
2 Pages Bangalore

PRGI/RNI: KNKAN/25/A1348


# ಡಿಜಿಟಲ್ ವಾರ್ತೆ

ಕನ್ನಡ ದಿನಪತ್ರಿಕೆ
ಕನ್ನಡಿಗರ ಶಕ್ತಿ
DIGITAL VARTHE
digitalvarthe@gmail.com
www.digitalvarthe.com

## ಅಂತರ್ಜಾತಿ ವಿವಾಹವಾಗಿದ್ದಕ್ಕೆ ಗರ್ಭಿಣಿ ಮಗಳನ್ನೇ ಹ ತ್ಯೆ ಮಾಡಿದ ತಂದೆ

**ಧಾರವಾಡ:** ಪ್ರೀತಿಸಿ ಮದುವೆಯಾಗಿದ್ದಾರೆ ಎಂಬ ಕಾರಣಕ್ಕೆ ಹೆತ್ತ ಮಗಳನ್ನೆ ಕೊಲೆ ತಂದೆಯೊಬ್ಬ ಕೊಲೆಮಾಡಿರುವ ಘಟನೆ ಧಾರವಾಡ ಜಿಲ್ಲೆಯ ಇನಾಂ ವೀರಾಪುರ ಗ್ರಾಮದಲ್ಲಿ ನಡೆದಿದೆ. ಸಮಾಜದ ಕಟ್ಟುಪಾಡುಗಳ ಮುಂದೆ ಮಾನವೀಯತೆ ಮರೆತ ತಂದೆ, ತನ್ನ ಗರ್ಭಿಣಿ ಮಗಳನ್ನೇ ಭೀಕರವಾಗಿ ಕೊಲೆ ಮಾಡಿ ಮರ್ಯಾದಾ ಹತ್ಯೆಯ ಪೈಶಾಚಿಕ ನಡೆಸಿದ್ದಾರೆ. ಕೊಲೆಯಾದ ಯುವತಿ ಮಾನ್ಯಾ ಮತ್ತು ಅದೇ ಗ್ರಾಮದ ವಿವೇಕಾನಂದ ಎಂಬುವವರು ಕಳೆದ ಕೆಲವು ವರ್ಷಗಳಿಂದ ಪರಸ್ಪರ ಪ್ರೀತಿಸುತ್ತಿದ್ದರು.

ಮಾನ್ಯಾ ವರೂರಿನ ಖಾಸಗಿ ಕಾಲೇಜಿನಲ್ಲಿ ಹಾಗೂ ವಿವೇಕಾನಂದ ಹುಬ್ಬಳ್ಳಿಯ ಕಾಲೇಜಿನಲ್ಲಿ ಪದವಿ ವ್ಯಾಸಂಗ ಮಾಡುತ್ತಿದ್ದ ಸಂದರ್ಭದಲ್ಲಿ ಇನ್‌ಸ್ಟಾಗ್ರಾಂ ಮೂಲಕ ಇಬ್ಬರ ಪರಿಚಯವಾಗಿತ್ತು. ಬಳಿಕ ಈ ಪರಿಚಯ ಇಬ್ಬರ ನಡುವಿನ ಪ್ರೇಮಕ್ಕೆ ತಿರುಗಿದೆ.



ಮಾನ್ಯಾ ಲಿಂಗಾಯತ ಸ ಮು ದಾ ಯ ಕ್ಕೆ ಸೇರಿದ ವರಾಗಿದ್ದರೆ, ವಿವೇಕಾನಂದ ದ ಲಿತ ಸಮುದಾಯದವರಾಗಿದ್ದರು. ಈ ವಿಷಯ ತಿಳಿದ ಯುವತಿಯ ಮನೆಯವರು ಮದುವೆಗೆ ತೀವ್ರ ವಿರೋ ಧ ವ್ಯಕ್ತಪ ಡಿಸಿದ್ದರು. ಆದರೆ, ವಿವೇಕಾನಂದನ ಬಿಟ್ಟು ಬದುಕಲಾರೆ ಎಂದು ಹಠ ಹಿಡಿದಿದ್ದ ಮಾನ್ಯಾ, ಕೊನೆಗೆ ಆತ್ಮಹತ್ಯೆ ಮಾಡಿಕೊಳ್ಳುವುದಾಗಿ ಎಚ್ಚರಿಕೆ ನೀಡಿದ್ದರು. ಬಳಿಕ ವಿವೇಕಾನಂದ, ಹುಬ್ಬಳ್ಳಿಯಲ್ಲಿ ಮಾನ್ಯಾ ಜೊತೆ ನೋಂದಾಯಿತ (ರಿಜಿಸ್ಟ್ರರ್) ವಿವಾಹವಾಗಿದ್ದರು.

ಮದುವೆಯ ನಂತರ ಎರಡು ಕುಟುಂಬಗಳ ನಡುವೆ ಸಂಘರ್ಷ ಉಂಟಾದಾಗ ಹುಬ್ಬಳ್ಳಿ ಗ್ರಾಮೀಣ ಪೊಲೀಸರು ರಾಜಿ ಸಂಧಾನ ಮಾಡಿಸಿದ್ದರು. ಪ್ರಾಣಭಯದಿಂದ ದಂಪತಿ ಊರು ಬಿಟ್ಟು ಹಾ ವೇ ರಿ ಯ ಲ್ಲಿ ನೆಲೆಸಿದ್ದರು. ಈ ಅವಧಿಯಲ್ಲಿ ಮಾನ್ಯಾ ಗ ರ್ಭಿ ಣಿ ಯಾ ಗಿ ದ್ದ ರು. ಅಷ್ಟರಲ್ಲಿ ಎಲ್ಲಾ ಕೋಪ ತಣ್ಣಗಾಗಿರಬಹುದು ಎಂದು ಭಾವಿಸಿದ ದಂಪತಿ, ಸ್ವಗ್ರಾಮಕ್ಕೆ ಮರಳಿದ್ದರು. ಹಳ್ಳಿಗೆ ಮರಳಿದ ಮೇಲೂ ಮತ್ತೆ ಕಿರಿಕ್ ಶುರುವಾದಾಗ ಪೊಲೀಸರು ಮತ್ತೊಮ್ಮೆ ಶಾಂತಿ ಸಭೆ ನಡೆಸಿದ್ದರು.

ಆದರೆ ಇದಾದ ಎರಡೇ ವಾರದಲ್ಲಿ ದಂಪತಿಗಳ ಮೇಲೆ ದಾಳಿ ನಡೆಸಲಾಗಿದೆ. ಭಾನುವಾರ ಸಂಜೆ ಮಾನ್ಯಾಳ ತಂದೆ ಪ್ರಕಾಶಗೌಡ ಪಾಟೀಲ್ ಮತ್ತು ಆತನ ಸಂಬಂಧಿಕರು ವಿವೇಕಾನಂದನ ಮನೆಗೆ ನುಗ್ಗಿದ್ದಾರೆ. ಮಾನ್ಯಾ, ಆಕೆಯ ಅತ್ತೆ ಮತ್ತು ಮಾವನ ಮೇಲೆ ಪೈಪ್ ಹಾಗೂ ಗುದ್ದಲಿಯಿಂದ ಮನಬಂದಂತೆ ಹಲ್ಲೆ ನಡೆಸಿದ್ದಾರೆ. ತೀವ್ರವಾಗಿ ಗಾಯಗೊಂಡ ಮಾನ್ಯಾ ಚಿಕಿತ್ಸೆ ಫಲಕಾರಿಯಾಗದೆ ಹುಬ್ಬಳ್ಳಿಯ ಖಾಸಗಿ ಆಸ್ಪತ್ರೆಯಲ್ಲಿ ಕೊನೆಯುಸಿರೆಳೆದಿದ್ದಾರೆ.

ಈ ಘೋರ ಕೃತ್ಯದ ಬಳಿಕ ವಿವೇಕಾನಂದನ ಪೋಷಕರು ಹುಬ್ಬಳ್ಳಿಯ ಕಿಮ್ಸ್ ಆಸ್ಪತ್ರೆಯಲ್ಲಿ ಚಿಕಿತ್ಸೆ ಪಡೆಯುತ್ತಿದ್ದಾರೆ. ಘಟನಾ ಸ್ಥಳಕ್ಕೆ ಧಾರವಾಡ ಎಸ್‌ಪಿ ಗುಂಜನ್ ಆರ್ಯ ಭೇಟಿ ನೀಡಿ ಪರಿಶೀಲನೆ ನಡೆಸಿದ್ದಾರೆ. ಸದ್ಯ ಮಾನ್ಯಾಳ ತಂದೆ ಪ್ರಕಾಶಗೌಡ ಪಾಟೀಲ್ ಸೇರಿದಂತೆ ಮೂವರನ್ನು ಪೊಲೀಸರು ಬಂಧಿಸಿದ್ದಾರೆ.

## 25 ವರ್ಷದ ವಿದ್ಯಾರ್ಥಿಗಳಿಂದ ಶಿಕ್ಷಕರಿಗೆ ಗುರುವಂದನಾ ಕಾರ್ಯಕ್ರಮ



**ಬೆಂಗಳೂರು:** ಚಿಕ್ಕಬಿದರಕಲ್ಲು ಸರ್ಕಾರಿ ಪ್ರೌಢಶಾಲೆಯಲ್ಲಿ 1999-2000 ಸಾಲಿನ 10ನೇ ತರಗತಿ ಹಳೆ ವಿದ್ಯಾರ್ಥಿಗಳು ಸ್ನೇಹ ಸಮ್ಮಿಲನದ ಮೂಲಕ ಅಕ್ಷರ ಕಲಿಸಿದ ಸುಜಾತ, ಪಿ.ವಿ.ಲಲಿತ, ಬಿ.ಮಂಗಳಾಂಬಿಕೆ, ಜಯಲಕ್ಷ್ಮಿ, ಎಂ.ಎನ್. ಗೋವಿಂದಯ್ಯ, ಜಿ.ಎನ್.ರವಿ, ಬಿ.ಟಿ. ಗೋವಿಂದೇಗೌಡ ಗುರುಗಳಿಗೆ ಸನ್ಮಾನಿಸಿ ಗೌರವಿಸಿದರು. ಬೆಂಗಳೂರು ಉತ್ತರ ತಾಲ್ಲೂಕಿನ ಚಿಕ್ಕಬಿದರಕಲ್ಲು ಸರ್ಕಾರಿ ಪ್ರೌಢಶಾಲೆಯ ಸುಮಾರು 60ಕ್ಕೂ ಹೆಚ್ಚು ಹಳೆಯ ವಿದ್ಯಾರ್ಥಿಗಳು ಒಟ್ಟುಗೂಡಿ ಈ ಕಾರ್ಯಕ್ರಮ ಹಮ್ಮಿಕೊಂಡಿದ್ದರು. ಗುರುಬ್ರಹ್ಮ, ಗುರುವಿಷ್ಣು, ಗುರುದೇವೋ ಮಹೇಶ್ವರಃ, ಗುರುಸಾಕ್ಷಾತ್ ಪರಬ್ರಹ್ಮ, ತಸ್ಮೈ ಶ್ರೀ ಗುರುವೇ ನಮಃ, ಎಂಬ ನುಡಿಯಂತೆ 25 ವರ್ಷಗಳ ಹಿಂದೆ ಪ್ರಾಥಮಿಕ, ಪ್ರೌಢ ಘಟ್ಟದಲ್ಲಿನ ತಪ್ಪುಗಳನ್ನು ತಿದ್ದಿ ಅಕ್ಷರ ಜ್ಞಾನ ಕಲಿಸಿ ಸರಿಯಾದ ಹಾದಿಯಲ್ಲಿ ಜೀವನ ನಡೆಸಲು ಮಾರ್ಗದರ್ಶನ ನೀಡಿದ ಶಿಕ್ಷಕರನ್ನು ವಿದ್ಯಾರ್ಥಿಗಳು ನೆನೆಪು ಮಾಡಿಕೊಂಡು ಗುರುಗಳನ್ನು ಕರೆತಂದು ಸನ್ಮಾನಿಸಿದರು.

ಗುರುವಂದನೆ ಸ್ವೀಕರಿಸಿ ಎಂ.ಎನ್. ಗೋವಿಂದಯ್ಯ ಮಾತನಾಡಿ ವಿದ್ಯೆಯಿಂದ ವಿನಯ ವಿನಯದಿಂದ ಸಂಸ್ಕಾರ, ಸಂಸ್ಕಾರದಿಂದ ದೇಶದ ಉತ್ತಮ ಪ್ರಜೆ ಆಗಿದ್ದಾರೆ, ಅಲ್ಲದೇ ಕಲ್ಲನ್ನ ಹರಳು ಮಾಡಿದರೆ ಮರಳು ಅದೇ ಕಲ್ಲನ್ನ ನೆಲಕ್ಕೆ ಹಾಸಿದರೆ ಹಾಸುಗಲ್ಲು ಮತ್ತದೇ ಕಲ್ಲನ್ನ ಶಿಲ್ಪಿ ಕೆತ್ತಿ ಶಿಲೆ ಮಾಡಿ ದೇವಸ್ಥಾನದಲ್ಲಿ ಇಟ್ಟರೆ ಅದು ದೇವರಾಗುತ್ತದೆ ಅದೇ ರೀತಿ ವಿದ್ಯಾರ್ಥಿಗಳನ್ನ ತಿದ್ದಿತೀಡಿ ಉತ್ತಮ ಪ್ರಜೆ ಮಾಡುವಲ್ಲಿ ಶಿಕ್ಷಕರ ಪಾತ್ರ ಅವಿಸ್ಮರಣೀಯ ಎಂದರು.

ಇದೇ ಸಂದರ್ಭದಲ್ಲಿ ಬಿ.ಟಿ. ಗೋವಿಂದೇಗೌಡ ಮಾತನಾಡಿ ಕಲ್ಲಿನಲ್ಲಿಯೂ ಚಿಗುರನ್ನು ಬೆಳೆಸುವ ಶಕ್ತಿ ಇರುವುದು ಗುರುಗಳಿಗೆ ಮಾತ್ರ ಅಂತಹ ಗುರುಗಳಿಗೆ 25 ವರ್ಷದ ನಂತರ ಸನ್ಮಾನಿಸಿ ಗೌರವ ನೀಡುತ್ತಿರುವುದು ಸಂತಸದ ವಿಷಯ ಎಂದು ಭಾವುಕರಾದರು ಹಳೆಯ ವಿದ್ಯಾರ್ಥಿಗಳಾದ ಪ್ರಕಾಶ್, ಮಧುಕುಮಾರ್, ಮಂಜುಳಾ, ಸುಚಿತ್ರಾ, ನಿಂಗಪ್ಪ, ಸ್ವಾಮಿ.ಎನ್.ಕೆ, ನರೇಂದ್ರ, ವೆಂಕಟೇಶ್, ಮಾಲಾವತಿ, ಪುಷ್ಪಲತ, ಯಮುನಾ, ಮತ್ತಿತರು ಕಾರ್ಯಕ್ರಮದಲ್ಲಿ ಉಪಸ್ಥಿತರಿದ್ದರು. ಕಾರ್ಯಕ್ರಮಕ್ಕೂ ಮುಂಚಿತವಾಗಿ ನಿಧನರಾದ ಕಲಾಂಜಲಿ, ರಂಗಸ್ವಾಮಿ, ಕೆ.ರಾಮಯ್ಯ ಬಿ.ಎಸ್. ರವೀಂ ದ್ರರಾವ್ ಶಿಕ್ಷಕರಿಗೆ ಒಂದು ನಿಮಿಷ ಕಾಲ ಮೌನಾಚರಣೆ ಮಾಡಿದರು.

## 2026ನೇ ಸಾಲಿನ ನೂತನ ಕ್ಯಾಲೆಂಡರ್ ವಿತರಿಸಿದ - ಕಾಂಗ್ರೆಸ್ ಮುಖಂಡ ಮಂಜುನಾಥ್ ಟ್ರಾವೆಲ್ಸ್"



**ಪೀಣ್ಯ ದಾಸರಹಳ್ಳಿ:** ವರ್ಷದಲ್ಲಿ ಹೊಸ ಸಂಕಲ್ಪಗಳನ್ನು ಮಾಡುವಾಗ ದೂರದೃ ಷ್ಟಿಯನ್ನು ಇಟ್ಟುಕೊಳ್ಳುವುದು ಮುಖ್ಯ. ದೂರದರ್ಶಿತ್ವ ಬದುಕಿನಲ್ಲಿ ಧನಾತ್ಮಕ ಪರಿವರ್ತನೆ ತರುತ್ತದೆ. ಅಂತೆಯೇ ಬದುಕಿನಲ್ಲಿ ಧನಾತ್ಮಕ ಬದಲಾವಣೆ ತರುವುದು ಎಂದು ಬೆಂಗಳೂರು ಪಶ್ಚಿಮ ಜಿಲ್ಲಾ ಕಾಂಗ್ರೆಸ್ ಉಪಾಧ್ಯಕ್ಷ ಹಾಗೂ ದೊಡ್ಡ ಬಿದರಿಕಲ್ಲು ವಾರ್ಡಿನ ಗ್ರೇಟರ್ ಬೆಂಗಳೂರು ಚುನಾವಣಾ ಕಾಂಗ್ರೆಸ್ ಪ್ರಭಾವಿ ಆಕಾಂಕ್ಷಿ ಅಭ್ಯರ್ಥಿ ಮಂಜುನಾಥ್ ಟ್ರಾವೆಲ್ಸ್ ಹೇಳಿದರು. ನಮ್ಮ ನಾಯಕ ಮಾಜಿ ಸಚಿವ ಹಾಗೂ ಯಶವಂತಪುರ ವಿಧಾನಸಭಾ ಕ್ಷೇತ್ರದ ಶಾಸಕ ಎಸ್ ಟಿ ಸೋಮಶೇಖರ್ ಅವರ ಆಶಿ ರ್ವಾದ ಮಾರ್ಗದರ್ಶನದಿಂದ. ನಾನು 2026ನೇ ಸಾಲಿನ ನೂತನ ವರ್ಷದ ತೂಗು ಪಂಚಾಂಗ (ಕ್ಯಾಲೆಂಡರ್) ಮನೆ ಮನೆ ವಿತರಿಸಿ ನಮ್ಮ ಜನ ಪ್ರಿಯ ಶಾಸಕ ಎಸ್ ಟಿ ಸೋಮಶೇಖರ್ ಅವರು ಕ್ಷೇತ್ರದಲ್ಲಿ ಮಾಡಿರುವ ಅಭಿವೃದ್ಧಿ ಕೆಲಸಗಳು ವಾರ್ಡಿನ ಜನತೆಗೆ ಮನವರಿಕೆ ಮಾಡಿ ಕ್ಯಾಲೆಂಡರ್ ವಿತರಿಸಿ ಮಂಜುನಾಥ್ ಟ್ರಾವೆಲ್ಸ್ ಮಾತಾಡಿ ದರು.

ಕಾಂಗ್ರೆಸ್ ಮುಖಂಡ ಕೇಶವಮೂರ್ತಿ ಸೇರಿದಂತೆ ಕಾಂಗ್ರೆಸ್ ಮುಖಂಡರು ಮಹಿಳೆಯರು ಕಾರ್ಯಕರ್ತರು ಮಂಜುನಾಥ್ ಟ್ರಾವೆಲ್ಸ್ ಅವರಿಗೆ ಸಾಥ್ ನೀಡಿದರು.

## ಗ್ಯಾಸ್ ಬಂಕ್ ಸರ್ಕಲ್‌ಗೆ ಶ್ರೀ ಶಿವಕುಮಾರ ಸ್ವಾಮಿ ಹೆಸರು ನಾಮಕರಣ



ಪೀಣ್ಯ ದಾಸರಹಳ್ಳಿ : ರಾಜಗೋಪಾಲನಗರ ವಾರ್ಡ್ ಬಿಜೆಪಿ ಮುಖಂಡರು ಹಾಗೂ ಸಮೃದ್ಧಿ ಫೌಂಡೇಷನ್ ಸಂಸ್ಥಾಪಕ ಅಧ್ಯಕ್ಷ ಬಿ.ಎನ್ ದಿನೇಶ್ ನೇತೃತ್ವದಲ್ಲಿ ಶಾಸಕ ಎಸ್ ಮುನಿರಾಜು ಹುಟ್ಟುಹಬ್ಬದ ಪ್ರಯುಕ್ತ ಹಮ್ಮಿಕೊಂಡಿದ್ದ ಕಾರ್ಯಕ್ರಮದಲ್ಲಿ ಪೀಣ್ಯ ಎರಡನೇ ಹಂತ ಹಾಗೂ ಹೆಗ್ಗನಹಳ್ಳಿ ಮುಖ್ಯರಸ್ತೆಯ ಗ್ಯಾಸ್ ಬಂಕ್ ಬಳಿ ಇರುವ ಸರ್ಕಲ್ ಲಿಂಗೈಕ್ಯ ಪರಮಪೂಜ್ಯ ಸಿದ್ಧಗಂಗಾ ಶ್ರೀ ಶಿವಕುಮಾರ ಸ್ವಾಮಿಗಳ ಹೆಸರಿನ ನಾಮಕರಣ ಫಲಕವನ್ನು ಶಾಸಕ ಎಸ್ ಮುನಿರಾಜು ಉದ್ಘಾಟಿಸಿ ಅವರು ಮಾ ತ ನಾ ಡಿ ದ ರು . ಕಾಯಕ ಯೋಗಿ, ತ್ರಿವಿಧ ದಾಸೋಹಿ, ಪದ್ಮಭೂಷಣ, ಕರ್ನಾಟಕ ರತ್ನ ಲಿಂಗೈಕ್ಯ ಸ್ವಾಮೀಜಿ ಅವರ ಹೆಸರು ಈ ಭಾಗದಲ್ಲಿ ಶಾಶ್ವತವಾಗಿ ಇರುತ್ತದೆ.

ಅದು ನಾವು ಅವರಿಗೆ ಕೊಡುವ ಗೌರವ ಎಂದರು. ರಾಜಗೋಪಾಲನಗರ ವಾರ್ಡ್ ಬಿಜೆಪಿ ಮುಖಂಡ ಹಾಗೂ ಸಮೃದ್ಧಿ ಫೌಂಡೇಷನ್ ಸಂಸ್ಥಾಪಕ ಅಧ್ಯಕ್ಷ ಬಿ.ಎನ್ ದಿನೇಶ್ ಮಾತನಾಡಿ, ಪೀಣ್ಯ ಹೆಗ್ಗನಹಳ್ಳಿ ಮುಖ್ಯರಸ್ತೆಯಲ್ಲಿ ಗ್ಯಾಸ್ ಬಂಕ್ ನಲ್ಲಿರುವ ಸರ್ಕಲ್ ಗೆ ಶ್ರೀ ಸಿದ್ದಗಂಗಾ ಶ್ರೀ ಶಿವಕುಮಾರ ಸ್ವಾಮಿಗಳ ಹೆಸರು ನಾಮಕರಣ ಮಾಡಿದ್ದು ಮುಂಬರುವ ದಿನಗಳಲ್ಲಿ ಹಲವು ರಸ್ತೆಗಳಿಗೆ ಮಹನೀಯರ ಹೆಸರುಗಳನ್ನು ಇಡಲು ಚಿಂತಿಸಲಾಗಿದೆ ಎಂದರ . ಕಾರ್ಯಕ್ರಮದಲ್ಲಿ ಮಂಡಲ ಬಿಜೆಪಿ ಅಧ್ಯಕ್ಷ ಸೋಮಶೇಖರ್, ರಾಜಗೋಪಾಲನಗರ ವಾರ್ಡ್ ಅಧ್ಯಕ್ಷ ರಾದ ನರಸಿಂಹಮೂರ್ತಿ(ಮಂಗಳ ವಾಟರ್), ಮಾಜಿ ವಾರ್ಡ್ ಅಧ್ಯಕ್ಷರಾದ ನಾಗೇಶ್, ಆರ್.ಸಿ ಹರೀಶ್, ಶ್ರೀಮತಿ ಸುಜಾತ ಮುನಿರಾಜು, ಸವಿತಾ ದಿನೇಶ್, ಗುರು ನಿಶ್ಚಲ್, ವೈ.ಜಿ ನಾಗರಾಜ್, ಮೋಹನ್, ಕಂಪ್ಯೂಟರ್ ಏಳು ಮಲೈ, ಸಂತೋಷ್ ನಾಯ್ಡು ಇನ್ನು ಹಲವಾರು. ಮುಖಂಡರು ಮತ್ತಿತರರು ಭಾಗವಹಿಸಿದ್ದರು.

## ಸರ್ಕಾರ ಒಳ ಮೀಸಲಾತಿಯನ್ನು ಮರು ಪರಿಶೀಲನೆ ಮಾಡಿ ಜಾರಿಗೆ ತರಬೇಕು-ಭೋವಿ ಸಮಾಜ ಆಗ್ರಹ



**ಬೆಳಗಾವಿ:** ಕರ್ನಾಟಕ ಅನುಸೂಚಿತ ಜಾತಿಗಳ ವಿಧೇಯಕಕ್ಕೆ ಭೋವಿ ಸಮಾಜದವರು ವಿರೋಧವನ್ನು ವ್ಯಕ್ತಪಡಿಸಿದರೇ. ಒಳ ಮೀಸಲಾತಿ ವಿಧೇಯಕವನ್ನು ಜಾರಿ ಮಾಡುವ ಮುಂಚೆ ಇದರ ಬಗ್ಗೆ ಮತ್ತೊಮ್ಮೆ ಪುನರ್‌ಪರೀಶಿಲಿಸಿ ಜಾರಿ ಮಾಡುವಂತೆ ಮುಖ್ಯಮಂತ್ರಿಗಳಿಗೆ ಕರ್ನಾಟಕ ರಾಜ್ಯ ಭೋವಿ ಸಂಘಟನೆಗಳು ಒಕ್ಕೂಟದ ಅಧ್ಯಕ್ಷ ಸಂಗಮೇಶ್ ನೇತೃತ್ವದಲ್ಲಿ ಬೆಳಗಾವಿ ಯಲ್ಲಿ ನಡೆದ ಪ್ರತಿಭಟನೆ ಯಲ್ಲಿ ಸರ್ಕಾರಕ್ಕೆ ಮನವಿ ಪತ್ರ ನೀಡಲಾಯಿತು. ಒಳಮೀಸಲಾತಿಯಲ್ಲಿ ಸರಕಾರದ ಅಸಂಬದ್ಧ ತೀರ್ಮಾನವನ್ನು ವಿರೋಧಿಸಿದ್ದು, ಸರಕಾರ ಈ ವಿಧೇಯಕವನ್ನು ತುರಾತುರಿಯಲ್ಲಿ ಜಾರಿ ಮಾಡಲು ಹೊರಟಿದೆ ಈ ವಿಧೇಯಕ ಜಾರಿಯಾದರೆ ಭೋವಿ, ಲಂಬಾಣಿ, ಕೊರಚ ಹಾಗೂ ಕೊರಮ ಸಮುದಾಯಗಳಿಗೆ ಅನ್ಯಾಯವಾ ಗುತ್ತಿದೆ. ಸದಾಶಿವ ಆಯೋಗ ಎಡಗೈ, ಬಲಗೈ ಸಮುದಾಯಕ್ಕೆ ತಲಾ ಶೇ.6ರಷ್ಟು ಹಾಗೂ ಅಲೆಮಾರಿಗೆ ಶೇ.1 ಉಳಿದಂತೆ ಶೇ.4ರಷ್ಟು ಮೀಸಲಾತಿಯನ್ನು ನೀಡಲಾಗಿದೆ. ಇದರಲ್ಲಿ ಭೋವಿ, ಕೊರಚ, ಲಂಬಾಣಿ ಹಾಗೂ ಕೊರಮ ಸಮುದಾಯ ಶೇ. 5ರಷ್ಟು ಮೀಸಲಾತಿಯನ್ನು ನೀ ಡಿ ಇದರಲ್ಲಿ ಅಲೆಮಾರಿ ಸಮುದಾಯವನ್ನು ಸಹ ಸೇರಿಸಲಾಗಿದೆ ಇದರಿಂದ ಉಳಿದ ನಮ್ಮ ಭೋವಿ, ಕೊರಚ ಕೊರಮ ಬಂಜಾರ ಸಮುದಾಯಕ್ಕೆಶೇ.4ರಷ್ಟು ಮಾತ್ರ ಮೀಸಲಾತಿ ಸಿಗುತ್ತದೆ ಇದರಿಂದ ನಮಗೆ ಅನ್ಯಾಯವಾಗುತ್ತದೆ ಎಂದು ತಿಳಿಸಿದರು.

ಮುಖಂಡರಾದ ಲಯನ್ಸ್ ಶ್ರೀಧರ್ ಮಾತನಾಡಿ ಸರ್ಕಾರ ಈಗ ಉಪವರ್ಗೀಕರಣವನ್ನು ಜನಸಂಖ್ಯೆಗೆ ಅನುಗುಣವಾಗಿ ಮಾಡಬೇಕಾಗಿತ್ತು, ಆದರೆ ಜನಸಂಖ್ಯೆಗೆ ಅನುಗುಣವಾಗಿ ಮಾಡುವಲ್ಲಿ ಸರಕಾರದಿಂದ ಲೋಪವಾಗಿದೆ ಎಂದು ಮುಖ್ಯ ಮಂತ್ರಿ ಸಿದ್ದರಾಮಯ್ಯರವರಿಗೆ ಮನವಿ ಪತ್ರ ಕಳಿಸಲಾಗಿತ್ತು. ಸರಕಾರ ನಾವು ತಿಳಿಸಿದ ಲೋಪಗಳನ್ನು ಸರಿಪಡಿಸಲಿಲ್ಲ ಮತ್ತು ಭೋವಿ ಬಂಜಾರ ಕೊರಮ ಕೊರಚ ಜಾತಿಗಳು ಶೇ. 5% ಮತ್ತು ಅಲೆಮಾರಿಗಳು 1ಕೆ ಜನಸಂಖ್ಯೆ ಇರುವುದರಿಂದ, 18% ಹೆಚ್ಚಿಸಿ ಪರಿಶಿಷ್ಟಜಾತಿಯ ಸಿ ಗುಂಪಿನಲ್ಲಿರುವ ಭೋವಿ, ಬಂಜಾರ, ಕೋರಮ, ಕೊರಚ ಅಲೆಮಾರಿ ಸಮುದಾಯಗಳಿಗೆ ಸಾಮಾಜಿಕ ನ್ಯಾಯ ಒದಗಿ ಸಬೇಕು. ಆನಂದ್ ಸಿ ತಿರುಮಲ ರಾಜ್ಯ ಪ್ರಶಸ್ತಿ ವಿಜೇತರು.

ಪ್ರತಿಭಟನೆ ಯಲ್ಲಿ ಮುಖಂಡರಾದ, ಸಂಗಮೇಶ, ಬಂಗಾರ ರಂಗನಾಥ್ ಸ್ವಾಮಿ, ಕವಿ ಸ್ವಾಮಿ, ಚಂದ್ರಶೇಖರ ಸ್ವಾಮಿ, ಸಿದ್ದರಾಮೇಶ್ವರಸ್ವಾಮಿನಂಜಪ್ಪ,ಆರತಿ,ವೆಂಕರ ಮಣ,ಮುನಿಕುಮಾರ್. ಎಂ ವಿಠ್ಠಲ್, ಆನಂದ್ ಸಿ ತಿರುಮಲ,ಶ್ರೀಧರ್ ಎಲ್, ರಂಗನಾಥ್ ಎಲ್ ಪತ್ರೊಟಿ, ಗೌತಮ್ ವೆಂಕಿ,ಮುನಿ ನಾರಾಯಣ್, ಗುರುಮೂರ್ತಿ ಇತರರು ಭಾಗವಹಿಸಿದರು.

ಕರ್ನಾಟಕ ಅನುಸೂಚಿತ ಜಾತಿಗಳ ವಿಧೇಯಕ 2025 ರಲ್ಲಿ ಮತ್ತೊಮ್ಮೆ ಆಸಂಬದ್ದವಾಗಿ ಪ್ರವರ್ಗ-ಸಿ ಯನ್ನು ವಿಂಗಡಿಸಿರುವುದನ್ನು ಖಂಡಿಸುತ್ತೇವೆ. ಭೋವಿ ಸಮುದಾಯವನ್ನು ಪ್ರತ್ಯೇಕಿಸಿ ಜನಸಂಖ್ಯಾವಾರು ಮೀಸಲು ನೀಡಬೇಕು. ಲಂಬಾಣಿ ಸಂಬಂಧಿತ ಜಾತಿಗಳು, ಕೊರಚ ಸಂಬಂಧಿತ ಜಾತಿಗಳು, ಕೊರಮ ಸಂಬಂಧಿತ ಜಾತಿಗಳಿಗೆ ನೀಡಿರುವ ಸಿ ವರ್ಗ ವನ್ನು ಮೀಸಲಾತಿ ಯನ್ನು ಮತ್ತೊಮ್ಮೆ ಪರಿಶೀಲನೆ ಮಾಡಬೇಕು ಎಂದು ಸರ್ಕಾರವನ್ನು ಒತ್ತಾಯಿಸಿದರ

## ಜನರು ಆರೋಗ್ಯ ಸಂಪಾದನೆಗೆ ಆದ್ಯತೆ ನೀಡಬೇಕು: ಮಲ್ಲಿಕಾರ್ಜುನ್,



ಕ್ರಿಯಾಶೀಲ ಕಾರ್ಯ ಚಟುವಟಿಕೆಗಳಲ್ಲಿ ನಮ್ಮನ್ನು ನಾವು ನಿತ್ಯ ತೊಡಗಿಸಿಕೊಳ್ಳುವ ಮೂಲಕ ನಮ್ಮ ದೈಹಿಕ ಮತ್ತು ಮಾನಸಿಕ ಆರೋಗ್ಯ ಗಳೆರಡನ್ನೂ ಕಾಪಾಡಿಕೊಳ್ಳಬಹುದೆಂದು ರಾಜ್ಯ ಆರ್.ಟಿ.ಓ ಅಧಿಕಾರಿಗಳ ಸಂಘದ ಅಧ್ಯಕ್ಷ ಮಲ್ಲಿಕಾರ್ಜುನ್ ಅಭಿಪ್ರಾ ಯಪಟ್ಟ ರು.

ಅವರು ತಾಲೂಕಿನ ತೇಗನಹಳ್ಳಿ ಸರ್ಕಾರಿ ಪ್ರಾಥಮಿಕ ಪಾಠಶಾಲೆಯ ಆವರಣದಲ್ಲಿ ಶ್ರೀ ಕ್ಷೇತ್ರ ಧರ್ಮಸ್ಥಳ ಗ್ರಾಮಭಿವೃದ್ದಿ ಯೋಜನೆಯ ವತಿಯಿಂದ ಪಟ್ಟಣದ ಮಾದೇಗೌಡ ಸ್ಮಾರಕ ಆಸ್ಪತ್ರೆ, ನ್ಯೂ ಅಪೂರ್ವ ಸೂಪರ್ ಸ್ಪೆಷಾಲಿಟಿ ಆಸ್ಪತ್ರೆ ಮತ್ತು ಬೆಂಗಳೂರಿನ ಬೆಳಕು ಕಣ್ಣಿನ ಆಸ್ಪತ್ರೆಯ ಸಹಯೋಗದಲ್ಲಿ ಗ್ರಾಮೀಣ ಜನರಿಗಾಗಿ ಆಯೋಜಿಸಿದ್ದ ಉಚಿತ ಆರೋಗ್ಯಮತ್ತು ಕಣ್ಣಿನ ತಪಾಸಣಾ ಶಿಬಿರವನ್ನು ಉದ್ಘಾಟಿಸಿ ಅವರು ಮಾತನಾ ಡಿದರು.

ನಮ್ಮ ಆರೋಗ್ಯ ಚನ್ನಾಗಿದ್ದರೆ ನಾವು ಎಷ್ಟು ಬೇಕಾದರೂ ಹಣ ಸಂಪಾಧಿಸಬಹುದು, ಹಣದಿಂದ ಆರೋಗ್ಯ ಸಂಪಾದನೆ ಸಾಧ್ಯವಿಲ್ಲ. ಜನ ಹಣ ಸಂಪಾದನೆಗಿಂತ ಮುಖ್ಯವಾಗಿ ಆರೋಗ್ಯ ಸಂಪಾದನೆಗೆ ಆದ್ಯತೆ ನೀಡಬೇಕು. ಆಧುನಿಕ ಜೀವನ ಶೈಲಿಯಿಂದ ನಮ್ಮ ಆರೋಗ್ಯದ ಮೇಲೆ ಗಂಭೀರವಾದ ದುಷ್ಪರಿಣಾಮ ಉಂಟಾಗುತ್ತಿದೆ. ನಾವು ನಮ್ಮ ಹಿರಿಯರ ನೈಸರ್ಗಿಕ ಆಹಾರ ಪದ್ಧತಿಗೆ ಹಿಂತಿರುಗಬೇಕು. ನಮ್ಮ ಆಹಾರವೇ ನಮ್ಮ ಔಷಧಿ ಎನ್ನುವುದನ್ನು ಮರೆಯಬಾರದು. ರಾಸಾಯನಿಕಗೊಬ್ಬರ ಬಳಕೆ, ಅತಿಯಾದ ಕೀಟ ನಾಶಕ ಮತ್ತು ಕಳೆ ನಾಶಕಗಳ ಬಳಕೆಯಿಂದ ಇಂದು ನಮ್ಮ ಆಹಾರವೂ ವಿಷಯುಕ್ತವಾಗುತ್ತಿದ್ದು ಪ್ರತಿಯೊಬ್ಬ ವ್ಯಕ್ತಿಯ ಆರೋಗ್ಯದ ಮೇಲೆ ಇದರ ಪರಿಣಾಮವಾಗುತ್ತಿದೆ. ರೈತ ಸಮುದಾಯ ಸಾವಯವ ಕೃಷಿ ಪದ್ಧತಿಗೆ ಆದ್ಯತೆ ನೀಡಿ ಗುಣ ಮಟ್ಟದ ಆಹಾರ ಪದಾರ್ಥಗಳನ್ನು ಬೆಳೆದು ದೇಶದ ಜನರಿಗೆ ನೀಡಬೇಕೆಂದು ಕರೆ ನೀಡಿದ ಮಲ್ಲಿಕಾರ್ಜುನ್ ಆರೋಗ್ಯವಂತ ಸಮಾಜ ನಿರ್ಮಾಣವೇ ದೇಶದ ನಿಜವಾದ ಸಂಪತ್ತು ಎಲ್ಲರೂ ಆರೋಗ್ಯವಂತ ಬದುಕು ಕಟ್ಟಿಕೊಳ್ಳುವಂತೆ ಮನವಿ ಮಾಡಿದರು,

ಇದೇ ಸಂದರ್ಭದಲ್ಲಿ ಹಿರೀಕಳಲೆ ಗ್ರಾಮ ಪಂಚಾಯತಿ ಸದಸ್ಯ ಟಿ.ಎನ್. ಮಹೇಶ್ ಧರ್ಮಸ್ಥಳ ಗ್ರಾಮಾಭಿವೃದ್ದಿ ಯೋಜನೆಯ ಜಿಲ್ಲಾ ನಿರ್ದೇಶಕ ಡಾ.ಎ.ಯೋಗೇಶ್, ಯೋಜನಾಧಿಕಾರಿ ಕೆ.ಪ್ರಸಾದ್, ಸಂಸ್ಥೆಯ ಮೇಲ್ವಿಚಾರಕಿ ಗುಣಶ್ರೀ, ವೈದ್ಯರುಗಳಾದ ಡಾ.ಎಂ.ಬಿ.ಲೋಹಿತ್, ಡಾ.ಶಿಲ್ಪ, ಡಾ.ತನುಶ್ರೀ, ಡಾ.ಅನನ್ಯ, ಡಾ. ಅವಿನಾಶ್, ಡಾ.ಶಶಿಕಾಂತ್, ಪತ್ರಕರ್ತರಾದ ಗಂಜಿಗೆರೆ ಮಹೇಶ್, ಶಂಭು ಕಿಕ್ಕೇರಿ, ಲೋಕೇಶ್. ವಿ, ಸಾಯಿಕುಮಾರ್, ಗ್ರಾ.ಪಂ ಸದಸ್ಯೆ ರಾಜಮ್ಮರಾಮಕೃಷ್ಣ, ಆಶಾ, ಸೇವಪ್ರತಿನಿಧಿಗಳು. ಗ್ರಾಮಸ್ಥರು ಸೇರಿದಂತೆ ಇನ್ನೂ ಅನೇಕ ಇದ್ದರು,

## ತುಂಗಾ ನದಿಯಲ್ಲಿ ಮುಳುಗಿ ಪಿಯುಸಿ ವಿದ್ಯಾರ್ಥಿ ಸಾವು

ದಾವಣಗೆರೆ / ಶಿವಮೊಗ್ಗ: ತುಂಗಾ ನದಿಯಲ್ಲಿ ಈಜಲು ಹೋಗಿದ್ದ ಪಿಯುಸಿ ವಿದ್ಯಾರ್ಥಿ ಮುಳುಗಿ ಸಾವನ್ನಪ್ಪಿದ ಶಿವಮೊಗ್ಗ ತಾಲೂಕಿನ ಪಿಳ್ಳಂಗಿರಿ ಗ್ರಾಮದಲ್ಲಿ ನಡೆದಿದೆ. ಮೃತನನ್ನು ಶಿವಮೊಗ್ಗ ನಗರದ ಪ್ರೇಮ್ ಕುಮಾರ್ ಎಂದು ಗುರುತಿಸಲಾಗಿದೆ. ಈತ ಸ್ನೇಹಿತರ ಜೊತೆ ಪಿಳ್ಳಂಗಿರಿಯ ದೇವಸ್ಥಾನಕ್ಕೆ ತೆರಳಿದ್ದ. ವಾಪಾಸ್ ಆಗುವಾಗ ಸ್ನೇಹಿತರ ಜೊತೆ ಈಜಲು ನದಿಗೆ ಸಾವನ್ನಪ್ಪಿದ್ದಾನೆ. ಪ್ರೇಮ್



ಡಿವಿಎಸ್ ಕಾಲೇಜಿನಲ್ಲಿ ಪಿಯುಸಿ ಓದುತ್ತಿದ್ದ ತಿಳಿದುಬಂದಿದೆ. ಸ್ಥಳಕ್ಕೆ ಶಿವಮೊಗ್ಗ ಗ್ರಾಮಾಂತರ ಠಾಣೆ ಪೊಲೀಸರು ಭೇಟಿ ನೀಡಿ ಪರಿಶೀಲಿಸಿದ್ದಾರೆ.

## ಸರಣಿ ಅಪಘಾತ: 10ಕ್ಕೂ ಹೆಚ್ಚು ವಾಹನಗಳಿಗೆ ಬೃಹತ್ ಕಂಟೈನರ್ ಡಿಕ್ಕಿ



**ಆನೇಕಲ್:** ಬೆಂಗಳೂರು ಹೊರವಲಯದ ಆನೇಕಲ್‌ನಲ್ಲಿ ಭೀಕರ ಸರಣಿ ಅಪಘಾತ ಸಂಭವಿಸಿದೆ. ಬೃಹತ್ ಕಂಟೈನರ್‌ವೊಂದು ರಸ್ತೆ ಅಕ್ಕಪಕ್ಕದಲ್ಲಿ ನಿಲ್ಲಿಸಿದ್ದ 10ಕ್ಕೂ ಹೆಚ್ಚು ವಾಹನಗಳಿಗೆ ಡಿಕ್ಕಿ ಹೊಡೆದಿದ್ದು, ಐವರು ಗಂಭೀರ ಗಾಯಗೊಂಡಿದ್ದಾರೆ. ಅಲ್ಲದೇ ಇಬ್ಬರು ಸಾವನ್ನಪ್ಪಿರುವ ಶಂಕೆ ವ್ಯಕ್ತವಾಗಿದೆ. ಪೊಲೀಸರಿಂದ 14 ಕಿಮೀ ತಪ್ಪಿಸಿಕೊಂಡು ಹೋಗಿದ್ದ ಲಾರಿ ಚಾಲಕನನ್ನ ಸಾರ್ವನಿಕರೇ ಹಿಡಿದು, ಥಳಿಸಿ ಪೊಲೀಸರಿಗೊಪ್ಪಿಸಿದ್ದಾರೆ.

ಮೇಲ್ನೋಟಕ್ಕೆ ಚಾಲಕ ಮದ್ಯದ ಅಮಲಿನಲ್ಲಿದ್ದ ಅನ್ನೋದು ಗೊತ್ತಾಗಿದೆ. ಬೆಸ್ತಮಾನಹಳ್ಳಿಯಿಂದ ಚಂದಾಪುರದ ಕಡೆಗೆ ಹೊರಟಿದ್ದ ಚಾಲಕ ರಸ್ತೆ ಅಕ್ಕಪಕ್ಕ ಸಿಕ್ಕಸಿಕ್ಕ ವಾಹನಗಳನ್ನೆಲ್ಲ ಗುದ್ದಿಕೊಂಡು ಹೋಗಿದ್ದಾನೆ. ಪೊಲೀಸರು 14 ಕಿಮೀ ಚೇಸ್ ಮಾಡಿದ್ರೂ ವಾಹನ ನಿಲ್ಲಿಸಿದೇ ಹೋಗಿದ್ದಾನೆ. ಕೊನೆಗೆ ಹೊಸೂರು ಹೆದ್ದಾರಿಯ ಚಂದಾಪುರದಲ್ಲಿ ಸಾರ್ವಜನಿಕರು ಕಲ್ಲು ತೂರಿ ಲಾರಿ ನಿಲ್ಲಿಸಿದ್ದಾರೆ.

ಲಾರಿ ನಿಲ್ಲಿಸುತ್ತಿದ್ದಂತೆ ಚಾಲಕನನ್ನ ಹೊರಗೆಳೆದು ಹಿಗ್ಗಾಮುಗ್ಗಾ ಥಳಿಸಿ, ಪೊಲೀಸರಿಗೊಪ್ಪಿಸಿದ್ದಾರೆ. ಸದ್ಯ ಲಾರಿ ಚಾಲಕನನ್ನ ವಶಕ್ಕೆ ಪಡೆದಿರುವ ಸೂರ್ಯ ಸಿಟಿ ಪೋಲಿಸರು, ವಿಚಾರಣೆ ನಡೆಸುತ್ತಿದ್ದಾರೆ. ಸರಣಿ ಅಪಘಾತಕ್ಕೆ ನಿಖರ ಕಾರಣ ಇನ್ನೂ ತಿಳಿದುಬಂದಿಲ್ಲ.

ಸುದ್ದಿ ಹಾಗೂ ಜಾಹೀರಾತುಗಳಿಗೆ ಸಂಪರ್ಕಿಸಿ
:9538786812/9880065534

Printed by: R Ramesh, Published by Abhishek D R On Behalf of Abhishek D R, Printed at Maruthi Enterprises. No.1159, Near Floor Mill, D Cross, Doddaballapura Town, Bengaluru rural, Karnataka - 561203, Published at No. 3769/1, Rajarathna Nivasa, KSRTC Layout, Near Ambedkar Stadium, Rayan Nagara, Nelamangala. Editor Abhishek D R.

# ರಾಷ್ಟ್ರಪತಿ ದ್ರೌಪದಿ ಮುರ್ಮು ಹೆಸರಿನಲ್ಲಿ ಡೀಪ್‌ಫೇಕ್ ವಿಡಿಯೋ: ಎಫ್‌ಐಆರ್ ದಾಖಲು



**ಬೆಂಗಳೂರು:** ರಾಷ್ಟ್ರಪತಿ ದ್ರೌಪದಿ ಮುರ್ಮು ಅವರ ಹೆಸರಿನಲ್ಲಿ ಡೀಪ್‌ಫೇಕ್ ವಿಡಿಯೋವನ್ನು ಸೃಷ್ಟಿಸಿ, ಸಾಮಾಜಿಕ ಜಾಲತಾಣದಲ್ಲಿ ಹರಿಬಿಟ್ಟು ಆರ್ಥಿಕ ವಂಚನೆ ನಡೆಸಿದ ಆರೋಪದಲ್ಲಿ ಮಹಾಲಕ್ಷ್ಮಿ ಲೇಔಟ್ ಪೊಲೀಸ್ ಠಾಣೆಯಲ್ಲಿ ಎಫ್‌ಐಆರ್ ದಾಖಲಾಗಿದೆ.

ಠಾಣೆಯ ಸಾಮಾಜಿಕ ಮಾಧ್ಯಮ ವಿಭಾಗದ ಉಸ್ತುವಾರಿ ಸಬ್ ಇನ್‌ಸ್ಪೆಕ್ಟರ್ ಪಿ. ರಾಕೇಶ್ ಅವರು ಡಿಸೆಂಬರ್ 5 ರಂದು ಫೇಸ್‌ಬುಕ್ ಖಾತೆಗಳನ್ನು ಪರಿಶೀಲಿಸುತ್ತಿದ್ದಾಗ 'ದೋನೆ ಡ್ರಿಮ್ಸ್' ಎಂಬ ಖಾತೆಯಲ್ಲಿ ರಾಷ್ಟ್ರಪತಿ ದ್ರೌಪದಿ ಮುರ್ಮು ಅವರು ಕೇಂದ್ರ ಸರ್ಕಾರದ ಹಣಕಾಸು ಯೋಜನೆಯನ್ನು ಉಲ್ಲೇಖಿಸಿ ಮಾತನಾಡುವಂತೆ ಕಾಣುವ ವಿಡಿಯೋವನ್ನು ಗಮನಿಸಿದರು.

ವಿಡಿಯೋದ ಕೆಳಗೆ ನೀಡಲಾದ ಲಿಂಕ್‌ನಲ್ಲಿ ಹಣ ಹೂಡಿಕೆ ಮಾಡಿ ಕೆಲಸ ಮಾಡದೆಯೇ ಮನೆಯಲ್ಲಿಯೇ ಕುಳಿತು ಹೆಚ್ಚಿನ ಲಾಭ ಪಡೆಯಬಹುದು ಎಂದು ಸುಳ್ಳು ಜಾಹೀರಾತು ನೀಡಲಾಗಿತ್ತು.

ಪ್ರಾಥಮಿಕ ತನಿಖೆಯಲ್ಲಿ ಇದು ರಾಷ್ಟ್ರಪತಿ ಅವರ ಮೂಲ ಭಾಷಣದ ವಿಡಿಯೋವನ್ನು ಕೃತಕ ಬುದ್ಧಿಮತ್ತೆ (ಎಐ) ತಂತ್ರಜ್ಞಾನದ ಮೂಲಕ ಡೀಪ್‌ಫೇಕ್ ಮಾಡಿ ರಚಿಸಲಾಗಿದೆ ಎಂದು ದೃಢಪಟ್ಟಿದೆ. ನಂತರ ಈ ಪೋಸ್ಟ್ ಅನ್ನು ಡಿಲೀಟ್ ಮಾಡಲಾಗಿದೆ.

ಈ ವಿಡಿಯೋವನ್ನು ನೋಡಿದವರು ಲಿಂಕ್‌ಗೆ ಭೇಟಿ ನೀಡಿ ಹಣ ಹೂಡಿಕೆ ಮಾಡುವ ಸಾಧ್ಯತೆ ಇದ್ದು, ಇದರಿಂದ ಸಾರ್ವಜನಿಕರಿಗೆ ಆರ್ಥಿಕ ನಷ್ಟ ಉಂಟಾಗಬಹುದು ಎಂದು ಪೊಲೀಸರು ಎಚ್ಚರಿಕೆ ನೀಡಿದ್ದಾರೆ. ಈ ಬಗ್ಗೆ ನಗರ ಪೊಲೀಸ್ ಆಯುಕ್ತರ ಗಮನಕ್ಕೆ ತಂದ ನಂತರ ತನಿಖೆ ನಡೆಸಿ, ಡಿಸೆಂಬರ್ 12 ರಂದು ಅಪರಿಚಿತ ವ್ಯಕ್ತಿ ಹಾಗೂ ಸಾಮಾಜಿಕ ಜಾಲತಾಣ ಖಾತೆದಾರನ ವಿರುದ್ಧ ಪ್ರಕರಣ ದಾಖಲಿಸಲಾಗಿದೆ. ಇದು ಸುಳ್ಳು ಮಾಹಿತಿ ಪ್ರಸಾರ, ಸಾರ್ವಜನಿಕರಿಂದ ಹಣ ಸುಲಿಗೆ ಮತ್ತು ಆರ್ಥಿಕ ನಷ್ಟ ಉಂಟುಮಾಡುವ ಆರೋಪಗಳನ್ನು ಒಳಗೊಂಡಿದೆ. ಇದು ಮೊದಲ ಬಾರಿ ಅಲ್ಲ. ಇತ್ತೀಚಿಗೆ ಸುಧಾ ಮೂರ್ತಿ ಅವರ ಹೆಸರಿನಲ್ಲಿಯೂ ಇದೇ ರೀತಿಯ ಡೀಪ್‌ಫೇಕ್ ವಿಡಿಯೋಗಳು ಹರಿಬಿಟ್ಟಿದ್ದವು.

# ಕಾಂಗ್ರೆಸ್ ಮೇಲೆ ನುಸುಳುಕೋರರ ರಕ್ಷಣೆ ಆರೋಪ: ಮೋದಿ ಕಿಡಿ

**ಗುವಾಹಟಿ:** ಅಸ್ಸಾಂನ ಗುವಾಹಟಿಯಲ್ಲಿ ನೂತನ ಏರ್‌ಪೋರ್ಟ್ ಟರ್ಮಿನಲ್ ಉದ್ಘಾಟಿಸಿದ ಪ್ರಧಾನಿ ನರೇಂದ್ರ ಮೋದಿ, ನುಸುಳುಕೋರರ ವಿಚಾರವಾಗಿ ಕಾಂಗ್ರೆಸ್ ವಿರುದ್ಧ ತೀವ್ರ ವಾಗ್ದಾಳಿ ನಡೆಸಿದ್ದಾರೆ. ಇತ್ತ ಕಲಬುರಗಿಯಲ್ಲಿ ಈ ಆರೋಪಗಳನ್ನು ತಳ್ಳಿಹಾಕಿರುವ ಮಲ್ಲಿಕಾರ್ಜುನ ಖರ್ಗೆ, ಇದು ಸರ್ಕಾರದ ವೈಫಲ್ಯ ಎಂದು ಕಿಡಿಕಾರಿದ್ದಾರೆ. ಗುವಾಹಟಿಯಲ್ಲಿ ಬೃಹತ್ ಸಮಾವೇಶ ಉದ್ದೇಶಿಸಿ ಮಾತನಾಡಿದ ಪ್ರಧಾನಿ ಮೋದಿ, ಚುನಾವಣಾ ಆಯೋಗವು ಎಸ್‌ಐಆರ್ (SIR) ಮೂಲಕ ನುಸುಳುಕೋರರನ್ನು ಚುನಾವಣಾ ಪ್ರಕ್ರಿಯೆಯಿಂದ ಹೊರಗಿಡಲು ಶ್ರಮಿಸುತ್ತಿದ್ದರೆ, ಇತ್ತ ದೇಶದ್ರೋಹಿ ಶಕ್ತಿಗಳು ಅವರಿಗೆ ರಕ್ಷಣೆ ನೀಡುತ್ತಿವೆ.



ಕಾಂಗ್ರೆಸ್ ದಶಕಗಳಿಂದ ಅಸ್ಸಾಂನ ಅಸ್ಮಿತೆ ಮತ್ತು ಭದ್ರತೆಗೆ ಧಕ್ಕೆ ತರುತ್ತಿರುವ ನುಸುಳುಕೋರರನ್ನು ಓಲೈಕೆಯ ರಾಜಕಾರಣಕ್ಕಾಗಿ ರಕ್ಷಿಸಿಕೊಂಡು ಬಂದಿದೆ ಎಂದು ಗಂಭೀರವಾಗಿ ಆರೋಪಿಸಿದರು. ಬಿಜೆಪಿ ಸರ್ಕಾರವು ಕಾಂಗ್ರೆಸ್ ಮಾಡಿದ ತಪ್ಪುಗಳನ್ನು ಮರುಕಳಿಸುವುದಿಲ್ಲ, ದೇಶದ ಭದ್ರತೆಯ ವಿಷಯದಲ್ಲಿ ಕಠಿಣ ಕ್ರಮ ಕೈಗೊಳ್ಳುವುದು ಖಚಿತ ಎಂದು ಮೋದಿ ತಿಳಿಸಿದ್ದಾರೆ.

ಗಡಿಯಲ್ಲಿ ಸೈನಿಕರಿಲ್ಲವೇ ಎಂದ ಖರ್ಗೆ ಪ್ರಧಾನಿ ಮೋದಿ ಅವರ ಈ ಹೇಳಿಕೆಗೆ ಕಲಬುರಗಿಯಲ್ಲಿ ಪ್ರತಿಕ್ರಿಯೆ ನೀಡಿದ ಮಲ್ಲಿಕಾರ್ಜುನ ಖರ್ಗೆ, ದೇಶದಲ್ಲಿ ನುಸುಳುಕೋರರು ಯಾರು ಎಂಬುದು ಪ್ರಧಾನಿಯವರಿಗೆ ಗೊತ್ತಿಲ್ಲವೇ ಗಡಿಯಲ್ಲಿ ಸೈನಿಕರು ಕಾವಲಿರುತ್ತಾರೆ, ದೇಶದಲ್ಲಿ ನಿಮ್ಮದೇ ಸರ್ಕಾರವಿದೆ.

ಹೀಗಿದ್ದೂ ನುಸುಳುಕೋರರು ಒಳಗೆ ಬರುತ್ತಿದ್ದಾರೆ ಎಂದರೆ ಅದು ನಿಮ್ಮ ಆಡಳಿತದ ವೈಫಲ್ಯವಲ್ಲವೇ ಹೊರತು ಅದನ್ನು ಮುಚ್ಚಿಕೊಳ್ಳಲು ಕಾಂಗ್ರೆಸ್ ಮೇಲೆ ಗೂಬೆ ಕೂರಿಸುವುದು ಸರಿಯಲ್ಲ ಎಂದು ತಿರುಗೇಟು ನೀಡಿದ್ದಾರೆ. ಇದೇ ಸಂದರ್ಭದಲ್ಲಿ ಉದ್ಯೋಗ ಖಾತರಿ (ಮನರೇಗಾ) ಯೋಜನೆ ಕುರಿತು ಮಾತನಾಡಿದ ಖರ್ಗೆ, ಕೇಂದ್ರ ಸರ್ಕಾರವು ರೈತರು ಮತ್ತು ಕಾರ್ಮಿಕರ ಹಿತಾಸಕ್ತಿಯನ್ನು ಬಲಿ ಕೊಡುತ್ತಿದೆ ಎಂದು ಆಕ್ರೋಶ ವ್ಯಕ್ತಪಡಿಸಿದರು.

ಮಹಾತ್ಮ ಗಾಂಧಿಯವರ ಹೆಸರನ್ನು ಯೋಜನೆಯಿಂದ ತೆಗೆದುಹಾಕಿ 'ಜೀ ರಾಮ್ ಜೀ' ಎಂದು ಹೆಸರಿಡಲು ಹೊರಟಿರುವುದು ಕ್ಷುಲ್ಲಕ ರಾಜಕಾರಣದ ಪರಮಾವಧಿ. ಹೆಸರು ಬದಲಾವಣೆಯಿಂದ ಬಡವರ ಹೊಟ್ಟೆ ತುಂಬುವುದಿಲ್ಲ ಎಂದು ಮಲ್ಲಿಕಾರ್ಜುನ್ ಖರ್ಗೆ ಟೀಕಿಸಿದ್ದಾರೆ. ಒಟ್ಟಾರೆಯಾಗಿ, ಅಸ್ಸಾಂನ ನುಸುಳುಕೋರರ ಸಮಸ್ಯೆ ಮತ್ತು ಕೇಂದ್ರದ ಯೋಜನೆಗಳ ಹೆಸರು ಬದಲಾವಣೆ ವಿಚಾರವು ದೇಶದ ರಾಜಕೀಯ ಅಖಾಡದಲ್ಲಿ ಭಾರಿ ಸಂಚಲನ ಮೂಡಿಸಿದೆ.

# ಪಕ್ಷದೊಳಗೆ ಭಿನ್ನಮತ ಇಲ್ಲ ಎಂದು ಸ್ಪಷ್ಟಪಡಿಸಿದ ಡಿ.ಕೆ. ಶಿವಕುಮಾರ್

**ಬೆಂಗಳೂರು:** "ನನಗೆ ಕಾಂಗ್ರೆಸ್‌ನ ಯಾವುದೇ ನಾಯಕರ ಜತೆ ಭಿನ್ನಾಭಿಪ್ರಾಯಗಳಿಲ್ಲ. ನಾನು, ಸಿಎಂ ಒಟ್ಟಿಗೆ ಸಹೋದರರಂತೆ ಕೆಲಸ ಮಾಡುತ್ತಿಲ್ಲವೇ?" ಎಂದು ಡಿಸಿಎಂ ಡಿ.ಕೆ. ಶಿವಕುಮಾರ್ ಅವರು ಹೇಳಿದ್ದಾರೆ. ಸದಾಶಿವನಗರದ ತಮ್ಮ ನಿವಾಸದ ಬಳಿ ಮಾಧ್ಯಮಗಳಿಗೆ ಪ್ರತಿಕ್ರಿಯೆ ನೀಡಿದ ಅವರು, ಮುಖ್ಯಮಂತ್ರಿಯವರ ಆಪ್ತ ಬಳಗದವರನ್ನು ಭೇಟಿ ಮಾಡಿದ್ದೀರಿ ಎಂದು ಕೇಳಿದಾಗ, "ಅವರಿಗೆ ಸಿಎಂ ಆಪ್ತರೇನು? ಅವರು ನನಗೂ ಆಪ್ತರೇ. ಅವರು ಯಾರಿಗೆ ಆಪ್ತರಿಲ್ಲ ಹೇಳಿ. ನಾನು ಸಿಎಂ ಆಪ್ತರಲ್ಲವೇ? ರಾಜಣ್ಣ ಅವರು ಜನತಾ ದಳದಲ್ಲಿದ್ದರು. ನಾನು ಕಾಂಗ್ರೆಸ್ ನವನು. ಅಂದು ಎಸ್.ಎಂ. ಕೃಷ್ಣ ಅವರ ಅವಧಿಯಲ್ಲಿ ರಾಜಣ್ಣ ಅವರನ್ನು ಅಪೆಕ್ಸ್ ಬ್ಯಾಂಕ್ ಅಧ್ಯಕ್ಷನನ್ನಾಗಿ ಮಾಡಿದ್ದು ನಾನು.




ಹೋಗಿ ಬೇಕಾದರೆ ಅವರನ್ನೇ ಕೇಳಿ. ಸಿಎಂಗೂ ಇದಕ್ಕೂ ಸಂಬಂಧವೇ ಇಲ್ಲ" ಎಂದರು. ರಾಜಕೀಯ ಬೆಂಬಲಕ್ಕೆ ಕೆ.ಎನ್. ರಾಜಣ್ಣ ಹಾಗೂ ನೀವು ಭೇಟಿ ಮಾಡಿದ್ದೀರಿ ಎಂದಾಗ, "ನಾವು ಸಹೋದ್ಯೋಗಿಗಳು. ಅವರು ನಮ್ಮ ಜತೆ ಕೆಲಸ ಮಾಡಿರುವವರು. ನನಗೆ ಯಾರ ಜತೆಯೂ ಭಿನ್ನಾಭಿಪ್ರಾಯಗಳಿಲ್ಲ. ಕಳೆದ 16 ವರ್ಷಗಳಿಂದ, ಅವರು ನಮ್ಮ ಪಕ್ಷಕ್ಕೆ ಬಂದ ದಿನದಿಂದ ನನಗೂ ಮುಖ್ಯಮಂತ್ರಿಯವರಿಗೂ ಬಿನ್ನಾಭಿಪ್ರಾಯಗಳು ಏನಾದರೂ ಇದೆಯಾ? ಭಿನ್ನಾಭಿಪ್ರಾಯಗಳನ್ನು ಮಾಧ್ಯಮಗಳು, ವಿರೋಧ ಪಕ್ಷಗಳು ಸೃಷ್ಟಿ ಮಾಡುತ್ತಿವೆ. ತಮಗೆ ಬೇಕಾದ ಆಹಾರ ಸೃಷ್ಟಿಸುತ್ತಿದ್ದಾರೆ. ಕೆಲವು ಸಂದರ್ಭಗಳಲ್ಲಿ ರಾಜಕೀಯವಾಗಿ ಹೇಳಿಕೆ ಕೊಟ್ಟಿರುತ್ತಾರೆ. ಇದಕ್ಕೆ ಬೇಸರ ಮಾಡಿಕೊಳ್ಳಲು ಆಗುತ್ತದೆಯೇ? ಅಣ್ಣ ತಮ್ಮಂದಿರೇ ಜಗಳ ಮಾಡುತ್ತಾರಂತೆ, ಇನ್ನು ನಮ್ಮದು ಯಾವ ಜಗಳ" ಎಂದರು. "ಎಲ್ಲಾ ಕಾಂಗ್ರೆಸ್ ನಾಯಕರು ಒಟ್ಟಾಗಿ ಕೆಲಸ ಮಾಡುತ್ತಿದ್ದೇವೆ.

ಎಲ್ಲರೂ ನನ್ನ ಸ್ನೇಹಿತರು, ಸಹೋದ್ಯೋಗಿಗಳು, ಒಟ್ಟಿಗೆ ಇದ್ದೇವೆ. ನಾನಂತು ಯಾರ ಮೇಲೂ ಜಗಳ ಮಾಡಲು ಹೋಗಿಲ್ಲ. ಯಾವ ವಿಚಾರಕ್ಕೂ ಒಬ್ಬರ ಮೇಲೆ ಇನ್ನೊಬ್ಬರು ಇದುವರೆಗೂ ಹೇಳಿಕೆ ನೀಡಿಲ್ಲ. ದಾಖಲೆಗಳನ್ನು ತೆಗೆದು ನೋಡಿ. ವಿರೋಧ ಪಕ್ಷದವರ ಹೇಳಿಕೆಗಳಿಗೆ ನಾನು ಪ್ರತಿಕ್ರಿಯೆ ನೀಡಿದ್ದೇನೆಯೇ ಹೊರತು ನಾನಾಗಿಯೇ ಯಾರ ಮೇಲೂ ಹೇಳಿಕೆ ನೀಡಿಲ್ಲ. ನಾನಾಗಿಯೇ ಒಬ್ಬರ ಮೇಲಾದರೂ ಹೇಳಿಕೆ ನೀಡಿದ್ದರೆ ತಿಳಿಸಿ" ಎಂದರು. ರಾಜಣ್ಣ ಅವರು ನಮ್ಮ ಶಾಸಕರು, ನಮ್ಮ ಜತೆ ಮಂತ್ರಿಯಾಗಿದ್ದವರು. ಸೌಹಾರ್ದಯುತ ಭೇಟಿ ಮಾಡುತ್ತೇವೆ. ಶನಿವಾರ ಸರಿಯಾಗಿ ಮಾತನಾಡಲು ಆಗಲಿಲ್ಲ. ಅದಕ್ಕೆ ಇಂದು (ಭಾನುವಾರ) ಸಹ ಭೇಟಿ ಮಾಡುತ್ತೇನೆ ಎಂದು ಹೇಳಿದ್ದೇನೆ. ರಾಜ್ಯಪಾಲರ ಕಾರ್ಯಕ್ರಮ ಇರುವ ಕಾರಣಕ್ಕೆ ಆನಂತರ ಭೇಟಿ ಮಾಡುತ್ತೇನೆ"ಎಂದರು.

ಪಕ್ಷದಲ್ಲಿ ಯಾವ ಗೊಂದಲವೂ ಇಲ್ಲ ಬಿ.ಆರ್. ಸುದರ್ಶನ ಅವರು ಎಲ್ಲಾ ಗೊಂದಲಗಳನ್ನು ಬಗೆಹರಿಸಿ ಎಂದು ಮಲ್ಲಿಕಾರ್ಜುನ ಖರ್ಗೆ ಅವರಿಗೆ ಪತ್ರ ಬರೆದಿರುವ ಬಗ್ಗೆ ಕೇಳಿದಾಗ, "ನನ್ನ ಪ್ರಕಾರ ಯಾವ ಗೊಂದಲವೂ ಇಲ್ಲ. ಗೊಂದಲ ಎಲ್ಲಿದೆ. ಗೊಂದಲ ಮಾಧ್ಯಮ ಹಾಗೂ ಬಿಜೆಪಿ ಸೃಷ್ಟಿ. ಅವರ ಪಕ್ಷದಲ್ಲಿ ಸಾಕಷ್ಟು ತೊಂದರೆಗಳಿವೆ ಅದಕ್ಕೆ ಮಾಡುತ್ತಿದ್ದಾರೆ. ಮಾಧ್ಯಮಗಳಿಗೂ ಸುದ್ದಿ ಬೇಕು. ಅದಕ್ಕೆ ದಿನಾ ತೋರಿಸುತ್ತಿದ್ದೀರಿ ಅಷ್ಟೇ" ಎಂದರು. ಪರಮೇಶ್ವರ್ ಅವರು ಸಹ ಗೊಂದಲ ಬಗೆಹರಿಸುವ ಬಗ್ಗೆ ಮಾತನಾಡಿದ್ದಾರೆ ಎಂದು ಕೇಳಿದಾಗ, "ನಾನು ಅವರ ವಕ್ತಾರನಲ್ಲ. ಅವರು ಬಹಳ ನಾಯಕರು ಉತ್ತರ ನೀಡುತ್ತಾರೆ" ಎಂದರು. ಹೆಚ್ಚು ಆತ್ಮವಿಶ್ವಾಸ ಇರುವಂತೆ ಕಾಣುತ್ತಿದ್ದೀರಿ ಎಂದು ಕೇಳಿದಾಗ, "ನೀವೇ (ಮಾಧ್ಯಮಗಳ) ನನಗೆ ಆತ್ಮವಿಶ್ವಾಸ.


ಅನವಶ್ಯಕ ಪ್ರಚಾರ ನೀಡುತ್ತಿದ್ದೀರಿ. ಜನರ ಆಶೀರ್ವಾದವೇ ನನಗೆ ಆತ್ಮವಿಶ್ವಾಸ" ಎಂದರು. ಹೈಕಮಾಂಡ್ ನಿಂದ ಫೋನ್ ಕರೆ ಬರುವ ಮುಂಚೆಯೇ ಆತ್ಮವಿಶ್ವಾಸ ಕಾಣುತ್ತಿದೆ ಎಂದಾಗ, "ಈಗ ತಾನೇ ಹೈಕಮಾಂಡ್ ನಾಯಕರ ಜತೆ ಮಾತನಾಡಿದೆ. ಪರಿಷತ್ ಚುನಾವಣೆ ವಿಚಾರವಾಗಿ ನಾಲ್ಕು ಜನಕ್ಕೆ ಬಿ ಫಾರಂ ನೀಡುವ ವಿಚಾರ ಚರ್ಚೆ ನಡೆಸಿದೆ. ಹೆಸರನ್ನು ಘೋಷಿಸಿ ಎಂದು ಚರ್ಚೆ ನಡೆಸಿದೆ" ಎಂದರು. ಹೈಕಮಾಂಡ್ ಭೇಟಿಗೆ ದಿನಾಂಕ ನಿಗದಿಯಾಗಿದೆಯೇ ಎಂದಾಗ, "ಎಲ್ಲಿಗೆ ಹೋದರು ರಾಜಕೀಯಕ್ಕೆ ಬರುತ್ತಿದ್ದೀರಿ. ರಸ್ತೆಗುಂಡಿ ವಿಚಾರ ಬಿಡಲಾಯಿತು. ಎಲ್ಲಾ ಗುಂಡಿ ಮುಚ್ಚಲಾಗಿದೆ. ನಮ್ಮ ಜಿಬಿಎ ಆಯುಕ್ತರು ಬೆಳಿಗ್ಗೆ ಸಂಜೆ ಓಡಾಡಿ ಕೆಲಸ ಮಾಡುತ್ತಿದ್ದಾರೆ ಅದನ್ನೂ ತೋರಿಸುತ್ತಿಲ್ಲ" ಎಂದರು.

# ಪಂಚಾಯತ್ ವ್ಯಾಪ್ತಿಯಲ್ಲಿ ಚಿರತೆ ದಾಳಿ: ಮೇಕೆ ಸಾವು, ಮಾಲೀಕ ಗಾಯ



ಶಿವಗಂಗೆ ಗ್ರಾಮ ಪಂಚಾಯತ್ ವ್ಯಾಪ್ತಿಯ ಹುರಿಯಪ್ಪನ ಪಾಳ್ಯದ ಗಂಗಯ್ಯ ಎಂಬುವರ ಮೇಕೆ ಮೇಲೆ ಚಿರತೆ ದಾಳಿ ಮಾಡಿದೆ. ಮೇಕೆಯನ್ನ ಚಿರತೆ ಇಂದ ಪಾರು ಮಾಡಲು ಹೋದ ಗಂಗಯ್ಯ ನ ಮೇಲೂ ಚಿರತೆ ದಾಳಿ ಮಾಡಿದೆ

ಈ ಹಿಂದೆ ಕಂಬಾಳು ಗೊಲ್ಲರಹಟ್ಟಿಯಲ್ಲಿ ಕರಿಯಮ್ಮ ಎಂಬ ಮಹಿಳೆಯನ್ನ ಬಲಿ ಪಡೆದಿತ್ತು ಇಂತ ಸಾಕಷ್ಟು ಘಟನೆಗಳು ವರದಿಯಾಗುತ್ತಿದ್ದರು ಎಚ್ಚೆತ್ತು ಕೊಳ್ಳದ ಅಧಿಕಾರಿಗಳು, ಪ್ರಶ್ನೆ ಮಾಡಲು ಹೋದ ರೈತರ ಮೇಲೆ ದಬ್ಬಾಳಿಕೆಯ ಮಾತುಗಳ ನ್ನಾಡು ತ್ತಾರೆ ಹೈನುಗಾರಿಕೆ ಕೃಷಿ ಚಟುವಟಿಕೆಗಳಿಂದ ಬದುಕನ್ನ ಕಟ್ಟಿಕೊಂಡು ಜೀವನ ಮಾಡುತ್ತಿರುವ ನಮ್ಮ ಮೇಲೆ ಅಧಿಕಾರ ವರ್ಗದವರು ನಿರ್ದಿಷ್ಟ ಸಮಯದಲ್ಲಿ ನಿಮ್ಮ ಕೃಷಿ ಚಟುವಟಿಕೆಗಳಲ್ಲಿ ಭಾಗವಯಿಸಿ ಸಂಜೆ 6 ಗಂಟೆ ನಂತರ ಹೊರಗಡೆ ಬರಬಾರದೆಂಬಾ ಆದೇಶ ಹೊರಡಿ ಸುತ್ತಾರೆ ನಮಗೆ ಕಾಡುಪ್ರಾಣಿಗಳಿಂದ ರಕ್ಷಣೆ ನೀಡಿ ಎಂದರೆ, ನಿಮಗೆ ನೀವೇ ರಕ್ಷಣೆ ಮಾಡಿಕೊಳ್ಳಬೇಕು ಎಂದು ಉಡಾಪೆ ಮಾತುಗಳ ನ್ನಾಡಿ ಬೇಜವಾಬ್ದಾರಿತನ ತೋರಿದ ವಲಯ ಅರಣ್ಯಧಿಕಾರಿ ಮಂಜುನಾಥ
ಸ್ಥಳಕ್ಕೆ ಅರಣ್ಯ ಇಲಾಖೆ ಸಿಬ್ಬಂದಿ ಮಲ್ಲಪ್ಪ ಹಾಜರಾಗಿ ರೈತರಿಗೆ ಸಾಂತ್ವನ ಹೇಳಿ ಪರಿಹಾರ ಮೊತ್ತಕ್ಕಾಗಿ ಉನ್ನತ ಅಧಿಕಾರಿಗಳ ಗಮನಕ್ಕೆ ತರುತ್ತೇನೆಂದು ಆಶ್ವಾಸನೆ ನಿಡಿ ಎಚ್ಚರಿಕೆ ಇಂದ ಇರಲು ತಿಳಿಸಿ ಹೋದರು



**ಸೀಗೇಪಾಳ್ಯ, ಕಂಬಾಳು ಗೊಲ್ಲರಹಟ್ಟಿ, ಹುರಿಯಪ್ಪನಪಾಳ್ಯ ಈ ಗ್ರಾಮಗಳು ಅರಣ್ಯ ಅಂಚಿನಲ್ಲಿ ಇರುವುದರಿಂದ. ಇಲ್ಲಿ ಸಾಕಷ್ಟು ಕಾಡು ಪ್ರಾಣಿಗಳು ಊರಿನ ಒಳಗೆ ನುಗ್ಗಿ ಮನುಷ್ಯರು ಮತ್ತೆ ಸಾಕು ಪ್ರಾಣಿಗಳ ಮೇಲೆ ದಾಳಿ ಮಾಡುತ್ತಾಲೇ ಇವೆ. ಈ ಹಿಂದೆ ಕಂಬಾಳು ಗೊಲ್ಲರಹಟ್ಟಿ ನಿವಾಸಿ ಕರಿಯಮ್ಮ ಎಂಬ ಮಹಿಳೆಯನ್ನ ಬಲಿ ಪಡೆದು ರುಂಡವನ್ನೇ ತಿಂದು ಹಾಕಿತ್ತು ಆ ಭಯದಲ್ಲೇ ವಾಸ ಮಾಡುತ್ತಿರುವ ಸ್ಥಳೀಯರಿಗೆ ಸೂಕ್ತ ರಕ್ಷಣೆ ನೀಡುವಲ್ಲಿ ಅರಣ್ಯಧಿಕಾರಿಗಳು ವಿಫಲವಾಗಿದ್ದರೆ,ಇದಕ್ಕೆ ಸಂಬಂಧ ಪಟ್ಟ ಅಧಿಕಾರಿಗಳು ಕೃಷಿ ಮತ್ತೆ ಹೈನುಗಾರಿಕೆ ಇಂದ ಬದುಕನ್ನು ಕಟ್ಟಿಕೊಂಡು ಜೀವನ ಮಾಡುತ್ತಿರುವ ಜನರಿಗೆ ಮುಕ್ತವಾಗಿ ಬದುಕಲಿಕ್ಕೆ ಅವಕಾಶ ನೀಡಿ. ಕಾಡು ಪ್ರಾಣಿಗಳ ಹಾವಳಿ ತಪ್ಪಿಸಬೇಕೆಂದು ಅರಣ್ಯಧಿಕಾರಿಗಳಿಗೆ ಒತ್ತಾಯಿಸಿದ್ದಾರೆ**

# ರಸ್ತೆಗಿಳಿದ ವಾಹನ ಸವಾರರಿಗೆ ಆತಂಕ: ಪಂಕ್ಚರ್ ಮಾಫಿಯಾ ಮರಳಿ

**ಬೆಂಗಳೂರು:** ಸಿಲಿಕಾನ್ ಸಿಟಿಯ ಜನಬಿಡದ ರಸ್ತೆಗಳಲ್ಲಿ ಒಂದಾದ ಹೆಬ್ಬಾಳ ಮತ್ತು ಗೊರಗುಂಟೆಪಾಳ್ಯ ನಡುವಿನ ಹೊರ ವರ್ತುಲ ರಸ್ತೆಯಲ್ಲಿ ವಾಹನ ಸವಾರರು ಸಂಕಷ್ಟಕ್ಕೆ ಸಿಲುಕಿದ್ದಾರೆ. ಕಳೆದ ಕೆಲವು ದಿನಗಳಿಂದ ಈ ಭಾಗದಲ್ಲಿ 'ಪಂಕ್ಚರ್ ಮಾಫಿಯಾ' ಮತ್ತೆ ಸಕ್ರಿಯವಾಗಿದ್ದು, ಉದ್ದೇಶಪೂರ್ವಕವಾಗಿ ರಸ್ತೆಯ ಮೇಲೆ ಮೊಳೆಗಳನ್ನು ಚೆಲ್ಲುವ ಮೂಲಕ ಸವಾರರನ್ನು ಸುಲಿಗೆ ಮಾಡಲಾಗುತ್ತಿದೆ ಎಂಬ ದೂರುಗಳು ಕೇಳಿಬಂದಿವೆ.

ಇತ್ತೀಚೆಗೆ ಈ ರಸ್ತೆಯಲ್ಲಿ ಸಂಚರಿಸುತ್ತಿದ್ದ ಜಾಗೃತ ಸವಾರರೊಬ್ಬರು ರಸ್ತೆಯ ಮೇಲೆ ಬಿದ್ದಿದ್ದ ಕೈ ಬೊಗಸೆಯಷ್ಟು ಮೊಳೆಗಳನ್ನು ಸಂಗ್ರಹಿಸಿ ಅದರ ವಿಡಿಯೋ ಮತ್ತು ಫೋಟೋಗಳನ್ನು ಹಂಚಿಕೊಂಡಿದ್ದಾರೆ.' ಕರ್ನಾಟಕ ಪೋರ್ಟ್‌ಫೋಲಿಯೋ' ಎಂಬ ಎಕ್ಸ್ (ಟ್ವಿಟರ್) ಖಾತೆಯಲ್ಲಿ ಈ ಬಗ್ಗೆ ಎಚ್ಚರಿಕೆ ನೀಡಲಾಗಿದ್ದು, ದುಷ್ಕರ್ಮಿಗಳು ವಾಹನಗಳ ಟೈರ್‌ಗಳನ್ನು ಪಂಕ್ಚರ್ ಮಾಡಲು ಮೊಳೆಗಳನ್ನು ಚೆಲ್ಲುತ್ತಿದ್ದಾರೆ. ಇದು ಕೇವಲ ಕಾಕತಾಳೀಯವಲ್ಲ, ಇದೊಂದು ವ್ಯವಸ್ಥಿತ ಜಾಲ ಎಂದು ಪೋಸ್ಟ್ ಮಾಡಲಾಗಿದೆ. ರಸ್ತೆಯ ಎಡಭಾಗದಲ್ಲಿ ಅತಿ ಹೆಚ್ಚು ಮೊಳೆಗಳು ಕಂಡುಬಂದಿವೆ. ಸಾಮಾನ್ಯವಾಗಿ ದ್ವಿಚಕ್ರ ವಾಹನ ಸವಾರರು ಮತ್ತು ನಿಧಾನವಾಗಿ ಚಲಿಸುವ ವಾಹನಗಳು ರಸ್ತೆಯ ಎಡಭಾಗವನ್ನೇ ಬಳಸುತ್ತವೆ. ಇದನ್ನೇ ಬಂಡವಾಳ ಮಾಡಿಕೊಂಡಿರುವ ಕಿಡಿಗೇಡಿಗಳು, ಎಡಭಾಗದ ಟ್ರ್ಯಾಕ್‌ನಲ್ಲಿ ಮೊಳೆಗಳನ್ನು ಹರಡುತ್ತಿದ್ದಾರೆ.

ಟೈರ್ ಪಂಕ್ಚರ್ ಆದ ಕೂಡಲೇ ಹತ್ತಿರದಲ್ಲೇ ಇರುವ ಪಂಕ್ಚರ್ ಅಂಗಡಿಗಳಿಗೆ ಹೋಗುವಂತೆ ಮಾಡಿ, ಅಲ್ಲಿ ದುಬಾರಿ ಹಣ ವಸೂಲಿ ಮಾಡುವುದು ಈ ಮಾಫಿಯಾದ ಮುಖ್ಯ ಉದ್ದೇಶ ವಾಗಿದೆ.



ಕೇವಲ ಹಣ ವಸೂಲಿ ಮಾತ್ರವಲ್ಲದೆ, ವೇಗವಾಗಿ ಚಲಿಸುವ ವಾಹನಗಳ ಟೈರ್ ದಿಢೀರ್ ಪಂಕ್ಚರ್ ಆದರೆ ಚಾಲಕರು ನಿಯಂತ್ರಣ ತಪ್ಪಿ ದೊಡ್ಡ ಅಪಘಾತ ಸಂಭವಿಸುವ ಸಾಧ್ಯತೆಯಿದೆ. ವರ್ಷಗಳಿಂದ ಈ ರಸ್ತೆಯಲ್ಲಿ ಇಂತಹ ಘಟನೆಗಳು ನಡೆಯುತ್ತಿದ್ದರೂ ಅಧಿಕಾರಿಗಳು ಶಾಶ್ವತ ಕ್ರಮ ಕೈಗೊಂಡಿಲ್ಲ ಎಂದು ನೆಟ್ಟಿಗರು ಆಕ್ರೋಶ ಹೆಬ್ಬಾಳ ಮತ್ತು ಗೊರಗುಂಟೆಪಾಳ್ಯ ರಸ್ತೆಯಲ್ಲಿ ಸಂಚರಿಸುವಾಗ ರಸ್ತೆಯ ಎಡ ಅಂಚಿನಲ್ಲಿ ಚಲಿಸುವುದನ್ನು ಸಾಧ್ಯವಾದಷ್ಟು ತಪ್ಪಿಸಿ.

ಟೈರ್ ಪಂಕ್ಚರ್ ಆದ ತಕ್ಷಣ ಹತ್ತಿರದಲ್ಲೇ ಇರುವ ಸಣ್ಣಪುಟ್ಟ ತಾತ್ಕಾಲಿಕ ಅಂಗಡಿಗಳ ಬದಲಿಗೆ ಅಧಿಕೃತ ಸರ್ವಿಸ್ ಸೆಂಟರ್‌ಗಳಿಗೆ ಹೋಗಲು ಪ್ರಯತ್ನಿಸಿ. ರಸ್ತೆಯಲ್ಲಿ ಮೊಳೆಗಳು ಅಥವಾ ಸಂಶಯಾಸ್ಪದ ಚಟುವಟಿಕೆಗಳು ಕಂಡುಬಂದಲ್ಲಿ ಕೂಡಲೇ ಟ್ರಾಫಿಕ್ ಪೊಲೀಸ್ ಸಹಾಯವಾಣಿಗೆ ಮಾಹಿತಿ ನೀಡಿ. ಸಂಚಾರ ಪೊಲೀಸರು ಈ ಭಾಗದಲ್ಲಿ ಸಿಸಿಟಿವಿಗಳನ್ನ ಅಳವಡಿಸಬೇಕು ಇದರಿಂದ ತಪ್ಪಿತಸ್ಥರ ವಿರುದ್ಧ ಕಠಿಣ ಕ್ರಮ ಕೈಗೊಳ್ಳಲು ಸಹಾಯವಾಗುತ್ತದೆ ಎಂದು ಸಾರ್ವಜನಿಕರು ಮನವಿ ಮಾಡಿದ್ದಾರೆ.

# ಸಿಎಂ ಕುರ್ಚಿ ಕದನ ನಿಮ್ಮದೇ ಸಮಸ್ಯೆ: ಮಲ್ಲಿಕಾರ್ಜುನ್ ಖರ್ಗೆ

**ಕಲಬುರಗಿ:** ಕರ್ನಾಟಕ ಕಾಂಗ್ರೆಸ್‌ನಲ್ಲಿ ಕಳೆದ ಹಲವು ದಿನಗಳಿಂದ ತಾರಕಕ್ಕೇರಿರುವ 'ಮುಖ್ಯಮಂತ್ರಿ ಕುರ್ಚಿ' ಬದಲಾವಣೆ ಸಂಬಂಧಿಸಿದಂತೆ ಎಐಸಿಸಿ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ ಹೊಸ ಬಾಂಬ್ ಸಿಡಿಸಿದ್ದಾರೆ. ರಾಜ್ಯ ನಾಯಕತ್ವದ ನಡುವಿನ ತಿಕ್ಕಾಟಕ್ಕೆ ಹೈಕಮಾಂಡ್ ಕಾರಣ ಎನ್ನುವ ಊಹಾಪೋಹಗಳನ್ನು ತಳ್ಳಿಹಾಕಿರುವ ಅವರು, ಇದು ಸ್ಥಳೀಯವಾಗಿ ಸೃಷ್ಟಿಯಾಗಿರುವ ಸಮಸ್ಯೆ, ನೀವೇ ಸರಿಪಡಿಸಿಕೊಳ್ಳಿ ಎಂದು ಹೇಳುವ ಮೂಲಕ ಎರಡೂ ಬಣಗಳಿಗೆ ಶಾಕ್ ನೀಡಿದ್ದಾರೆ.

ಕಲಬುರಗಿಯಲ್ಲಿ ಮಾಧ್ಯಮಗಳೊಂದಿಗೆ ಮಾತನಾಡಿದ ಖರ್ಗೆ, ರಾಜ್ಯದ ನಾಯಕತ್ವ ಬದಲಾವಣೆ ಚರ್ಚೆಯ ಕುರಿತು ಅಸಮಾಧಾನ ವ್ಯಕ್ತಪಡಿಸಿದ್ದಾರೆ. ರಾಜ್ಯದಲ್ಲಿ ಸೃಷ್ಟಿಯಾಗಿರುವ ನಾಯಕತ್ವದ ಗೊಂದಲಗಳೆಲ್ಲವೂ ಸ್ಥಳೀಯವಾಗಿ ಸೃಷ್ಟಿಸಿಕೊಳ್ಳಲಾದ ಸಮಸ್ಯೆಗಳು. ಹೈಕಮಾಂಡ್ ಈ ಸಮಸ್ಯೆಯನ್ನು ಸೃಷ್ಟಿ ಮಾಡಿಲ್ಲ. ಎಲ್ಲದಕ್ಕೂ ದೆಹಲಿಯ ನಾಯಕರನ್ನು ದೂಷಿಸುವುದು ಸರಿಯಲ್ಲ. ಹೈಕಮಾಂಡ್ ಮಧ್ಯಪ್ರವೇಶಿಸಿ ತೀರ್ಪು ನೀಡಲಿ ಎಂದು ಕಾಯುವ ಬದಲು, ಸ್ಥಳೀಯ ನಾಯಕರೇ ಕುಳಿತು ಇದನ್ನು ಇತ್ಯರ್ಥ ಮಾಡಿಕೊಳ್ಳಬೇಕು ಎಂದು ಗುಡುಗಿದ್ದಾರೆ.



ಪರೋಕ್ಷವಾಗಿ ಮುಖ್ಯಮಂತ್ರಿ ಸಿದ್ದರಾಮಯ್ಯ ಮತ್ತು ಉಪಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಅವರಿಗೆ ಟಾಂಗ್ ನೀಡಿದ ಖರ್ಗೆ, ನನ್ನಿಂದಲೇ ಪಕ್ಷ ಅಧಿಕಾರಕ್ಕೆ ಬಂತು ಎಂದು ಯಾರೂ ಅಹಂನಿಂದ ಮಾತನಾಡಬಾರದು. ಯಾರೋ ಒಬ್ಬ ವ್ಯಕ್ತಿಯ ಪ್ರಯತ್ನದಿಂದ ಪಕ್ಷ ಅಧಿಕಾರಕ್ಕೆ ಬರುವುದಿಲ್ಲ. ಸಾಮಾನ್ಯ ಕಾರ್ಯಕರ್ತರು ಬೆವರು ಸುರಿಸಿ ಪಕ್ಷವನ್ನು ಅಧಿಕಾರಕ್ಕೆ ತಂದಿದ್ದಾರೆ. ಕಾರ್ಯಕರ್ತರ ಶ್ರಮವನ್ನು ಕಡೆಗಣಿಸಿ ಕೇವಲ ನಾಯಕತ್ವಕ್ಕಾಗಿ ಕಿತ್ತಾಡುವುದು ಶೋಭಿಸುವುದಿಲ್ಲ ಎಂದು ತಾಕೀತು ಮಾಡಿದರು. ಖರ್ಗೆ ಅವರ ಈ ಹೇಳಿಕೆ ಕಾಂಗ್ರೆಸ್‌ನ ಸಿದ್ದರಾಮಯ್ಯ ಮತ್ತು ಡಿ.ಕೆ. ಶಿವಕುಮಾರ್ ಬಣಗಳಲ್ಲಿ ತಲ್ಲಣ ಮೂಡಿಸಿದೆ. ಹೈಕಮಾಂಡ್ ಹಸ್ತಕ್ಷೇಪ ಮಾಡುತ್ತದೆ ಎಂದು ನಂಬಿದ್ದ ನಾಯಕರಿಗೆ, ಇದು ನಿಮ್ಮ ವೈಯಕ್ತಿಕ ಮತ್ತು ಸ್ಥಳೀಯ ಸಮಸ್ಯೆ ಎಂದು ಹೇಳುವ ಮೂಲಕ ಖರ್ಗೆಯವರು ಜವಾಬ್ದಾರಿಯಿಂದ ನುಣುಚಿಕೊಂಡಿದ್ದಾರೋ ಅಥವಾ ನಾಯಕರಿಗೆ ಬುದ್ಧಿವಾದ ಹೇಳಿದ್ದಾರೋ ಎಂಬ ಚರ್ಚೆ ಶುರುವಾಗಿದೆ. ಸದ್ಯ ಈ ಬಗ್ಗೆ ರಾಜ್ಯ ಕಾಂಗ್ರೆಸ್ ನಯಕರು ಯಾವುದೇ ಪ್ರತಿಕ್ರಿಯೆ ನೀಡಿಲ್ಲವಾದರೂ, ಖರ್ಗೆ ಅವರ ಈ ಖಡಕ್ ಹೇಳಿಕೆಯು ಕರ್ನಾಟಕ ಕಾಂಗ್ರೆಸ್‌ನಲ್ಲಿ ನಡೆಯುತ್ತಿರುವ ಕುರ್ಚಿ ಕಿತ್ತಾಟಕ್ಕೆ ತಾತ್ಕಾಲಿಕ ಬ್ರೇಕ್ ಹಾಕುತ್ತದೆಯೇ ಅಥವಾ ಮತ್ತಷ್ಟು ವಿವಾದಕ್ಕೆ ನಾಂದಿ ಹಾಡುತ್ತದೆಯೇ ಎಂದು ಕಾದು ನೋಡಬೇಕಿದೆ.

# ಸಿದ್ದರಾಮಯ್ಯ ಮೈಸೂರು ಪ್ರವಾಸ ವೇಳೆ ತಾಲೂಕು ಕಚೇರಿಗೆ ಬಾಂಬ್ ಬೆದರಿಕೆ

**ಮೈಸೂರು:** ಇತ್ತೀಚಿಗೆ ಮಂಗಳೂರು, ಭಟ್ಕಳ ಸೇರಿದಂತೆ ರಾಜ್ಯದಲ್ಲಿ ಹುಸಿ ಬಾಂಬ್ ಬೆದರಿಕೆ ಇ-ಮೇಲ್‌ಗಳು ಹೆಚ್ಚಿದ್ದು, ಇದೀಗ ಸಿಎಂ ಮೈಸೂರು ಭೇಟಿಯ ನಡುವೆಯೇ ಸರಗೂರು ತಾಲೂಕು ಕಚೇರಿಗೂ ಇದೇ ರೀತಿಯ ಇ-ಮೇಲ್ ಬಂದಿರುವುದು ಆತಂಕ ಸೃಷ್ಟಿಸಿದೆ. ಮಾಹಿತಿ ತಿಳಿದ ಪೊಲೀಸರು ಸ್ಥಳಕ್ಕೆ ಭೇಟಿ ನೀಡಿದ್ದು, ಪರಿಶೀಲನೆ ನಡೆಸಿದ್ದಾರೆ.


ಸಿಎಂ ಸಿದ್ದರಾಮಯ್ಯ ಮೈಸೂರಿಗೆ ಆಗಮಿಸಿರುವ ವೇಳೆಯಲ್ಲಿಯೇ ಮೈಸೂರಿನ ಸರಗೂರು ತಾಲ್ಲೂಕು ಕಚೇರಿಗೆ ಆರ್‌ಡಿಎಕ್ಸ್ ಬಾಂಬ್ ಇಟ್ಟಿರುವುದಾಗಿ ಇ-ಮೇಲ್ ಮೂಲಕ ಬೆದರಿಕೆ ಬಂದಿದೆ. ಮಧ್ಯಾಹ್ನ 1 ಗಂಟೆಗೆ ಸ್ಫೋಟಗೊಳ್ಳುವ ಎಚ್ಚರಿಕೆ ನೀಡಲಾಗಿದ್ದು, ಅಧಿಕಾರಿಗಳು ಹಾಗೂ ಸಾರ್ವಜನಿಕರಲ್ಲಿ ತೀವ್ರ ಆತಂಕ ಸೃಷ್ಟಿಸಿದೆ. ನಟ ಅಜಿತ್ ಕುಮಾರ್ ಹೆಸರನ್ನೂ ಸಹ ಮೇಲ್‌ನಲ್ಲಿ ಉಲ್ಲೇಖಿಸಲಾಗಿದೆ. ಮಾಹಿತಿ ತಿಳಿದು ಸ್ಥಳಕ್ಕೆ ಭೇಟಿ ನೀಡಿದ ಪೊಲೀಸರು ಪರಿಶೀಲನೆ ನಡೆಸುತ್ತಿದ್ದು, ಪರಿಸ್ಥಿತಿಯನ್ನು ನಿಯಂತ್ರಿಸಲು ಕ್ರಮ ಕೈಗೊಂಡಿದ್ದಾರೆ. ಇದೇ ಮೊದಲೇನಲ್ಲ ಹುಸಿ ಬೆದರಿಕೆ ಡಿ.12ರಂದು ಕೋಲಾರ ಜಿಲ್ಲಾಧಿಕಾರಿ ಕಚೇರಿಗೆ ಬಂದ ಬಾಂಬ್ ಬೆದರಿಕೆ ಇಮೇಲ್ ಕೆಲಕಾಲ ಆತಂಕ ಸೃಷ್ಟಿಸಿತ್ತು. ಜಿಲ್ಲಾಡಳಿತ ಹಾಗೂ ಪೊಲೀಸರು ತಕ್ಷಣ ಕಾರ್ಯಪ್ರವೃತ್ತರಾಗಿ ಶೋಧ ನಡೆಸಿದ್ದು, ತಮಿಳುನಾಡಿನ 13 ವರ್ಷದ ಬಾಲಕಿಯಿಂದ ಬಂದ ಹುಸಿ ಬೆದರಿಕೆ ಎಂದು ತಿಳಿದುಬಂದಿತ್ತು.

ಗದಗ ಜಿಲ್ಲಾಡಳಿತ ಭವನ ಸ್ಫೋಟಿಸುವುದಾಗಿ ಇ-ಮೇಲ್ ಮೂಲಕ ಡಿಸಿ ಕಚೇರಿಗೆ ಬಾಂಬ್ ಬೆದರಿಕೆ ಹಾಕಲಾಗಿದ್ದು, ಪಾಕ್‌ನ ಐಎಸ್‌ಐ ಮತ್ತು ಎಲ್‌ಟಿಟಿಇ ಕಾರ್ಯಕರ್ತರ ಜೊತೆ ಸೇರಿ 5 ಬಾಂಬ್‌ಗಳಿಂದ ಜಿಲ್ಲಾಡಳಿತ ಭವನ ಸ್ಫೋಟಿಸುವುದಾಗಿ ಕಿಡಿಗೇಡಿಗಳು ಧಮ್ಕಿ ಹಾಕಿದ್ದರು. ಇದಷ್ಟೇ ಅಲ್ಲದೇ ಉತ್ತರ ಕನ್ನಡದ ಭಟ್ಕಳ ಮತ್ತು ತುಮಕೂರಿನ ಜಿಲ್ಲಾಧಿಕಾರಿ ಶುಭಕಲ್ಯಾಣ್ ಅವರ ಅಧಿಕೃತ ಇ-ಮೇಲ್ ಐಡಿಗೂ ಬಾಂಬ್ ಬೆದರಿಕೆ ಸಂದೇಶ ಬಂದಿದ್ದು, ತಕ್ಷಣ ಪೊಲೀಸರು ಡಿಸಿ ಕಚೇರಿಗೆ ಧಾವಿಸಿ ಒಳಭಾಗದಲ್ಲಿ ತೀವ್ರ ತಪಾಸಣೆ ನಡೆಸಿದ್ದರು.

ಈ ಎಲ್ಲಾ ಇ-ಮೇಲ್‌ಗಳೂ ಹುಸಿ ಬೆದರಿಕೆಗಳೆಂದು ತಿಳಿದುಬಂದಿದ್ದವು. ಇದೀಗ ಮತ್ತೊಮ್ಮೆ ಮೈಸೂರಿನಲ್ಲಿಯೂ ಬೆದರಿಕೆ ಇ-ಮೇಲ್ ಬಂದಿದ್ದು, ಗೊಂದಲ ಸೃಷ್ಟಿಸಿದೆ.

# ಗಾಯಕಿ ಲಗ್ನಜಿತಾ ಚಕ್ರವರ್ತಿಗೆ ಕಿರುಕುಳ ಪ್ರಕರಣ: ಆರೋಪಿ ಬಂಧನ

**ಕೋಲ್ಕತ್ತಾ:** ಪಶ್ಚಿಮ ಬಂಗಾಳದ ಖ್ಯಾತ ಗಾಯಕಿ ಲಗ್ನಜಿತಾ ಚಕ್ರವರ್ತಿ ಅವರು ಲೈವ್ ಸಂಗೀತ ಕಚೇರಿಯ ವೇಳೆ ಕಾರ್ಯಕ್ರಮವೊಂದರಲ್ಲಿ ಧಾರ್ಮಿಕ ಹಾಡನ್ನು ಹಾಡುತ್ತಿದ್ದಾಗ, 'ಜಾತ್ಯತೀತ' ಹಾಡುಗಳನ್ನು ಹಾಡುವಂತೆ ಒತ್ತಾಯಿಸಿ ವ್ಯಕ್ತಿಯೊಬ್ಬ ಕಿರುಕುಳ ನೀಡಿದ ಘಟನೆ ವರದಿಯಾಗಿದೆ. ಈ ಸಂಬಂಧ ಶಾಲಾ ಮಾಲೀಕ ಹಾಗೂ ಕಾರ್ಯಕ್ರಮದ ಸಂಘಟಕ ಮೆಹಬೂಬ್ ಮಲ್ಲಿಕ್ ಎಂಬಾತನನ್ನು ಪೊಲೀಸರು ಬಂಧಿಸಿದ್ದಾರೆ. ವೇದಿಕೆಯಲ್ಲೇ ಹಲ್ಲೆಗೆ ಯತ್ನ ಪೂರ್ವ ಮಿಡ್ನಾಪುರದ ಭಗವಾನ್‌ಪುರದಲ್ಲಿರುವ ಖಾಸಗಿ ಶಾಲೆಯೊಂದರಲ್ಲಿ ಲಗ್ನಜಿತಾ ಅವರ ಸಂಗೀತ ಕಚೇರಿ ಆಯೋಜಿಸಲಾಗಿತ್ತು.



'ಬಸಂತೋ ಎಶೆ ಗೆಚೆ' ಹಾಡಿನ ಮೂಲಕ ಮನೆಮಾತಾಗಿರುವ ಲಗ್ನಜಿತಾ ಅವರು ವೇದಿಕೆಯ ಮೇಲೆ 'ಜಾಗೋ ಮಾ' ಎಂಬ ಬಂಗಾಳಿ ಧಾರ್ಮಿಕ ಗೀತೆಯನ್ನು ಹಾಡುತ್ತಿದ್ದರು. ಈ ವೇಳೆ ವೇದಿಕೆಗೆ ನುಗ್ಗಿದ ಶಾಲೆಯ ಮಾಲೀಕ ಮೆಹಬೂಬ್ ಮಲ್ಲಿಕ್, ಹಾಡನ್ನು ನಿಲ್ಲಿಸುವಂತೆ ಕಿರುಚಾಡಿ ದೈಹಿಕವಾಗಿ ಹಲ್ಲೆ ನಡೆಸಲು ಮುಂದಾಗಿದ್ದಾನೆ ಎಂದು ಗಾಯಕಿ ದೂರಿನಲ್ಲಿ ತಿಳಿಸಿದ್ದಾರೆ. ಆರೋಪಿ ಮೆಹಬೂಬ್ ಮಲ್ಲಿಕ್ ಗಾಯಕಿಯ ಮೇಲೆ ಕೂಗಾಡುತ್ತಾ, ಒನೆಕ್ ಜಾಗೋ ಮಾ ಹೋಯೆಚೆ, ಎಬರ್ ಕಿಚ್ಚು ಸೆಕ್ಯುಲರ್ ಗಾ" (ಜಾಗೋ ಮಾ ಹಾಡಿದ್ದು ಸಾಕು, ಈಗ ಯಾವುದಾದರೂ ಜಾತ್ಯತೀತ ಹಾಡುಗಳನ್ನು ಹಾಡಿ) ಎಂದು ಅಬ್ಬರಿಸಿದ್ದಾನೆ. ಅವನು ನನ್ನನ್ನು ಹೊಡೆಯಲು ಬಂದಿದ್ದನು, ಆತನ ವರ್ತನೆ ಅತ್ಯಂತ ಭಯಾನಕವಾಗಿತ್ತು ಎಂದು ಲಗ್ನಜಿತಾ ಪೊಲೀಸರಿಗೆ ನೀಡಿದ ದೂರಿನಲ್ಲಿ ವಿವರಿಸಿದ್ದಾರೆ. ಪೊಲೀಸರ ನಿರ್ಲಕ್ಷ್ಯ ಮತ್ತು ಇಲಾಖಾ ವಿಚಾರಣೆ ಗಾಯಕಿ ಲಗ್ನಜಿತಾ ಅವರು ಈ ಘಟನೆಯ ನಂತರ ಕೂಡಲೇ ಭಗವಾನ್‌ಪುರ ಪೊಲೀಸ್ ಠಾಣೆಗೆ ತೆರಳಿದ್ದರು.

ಆದರೆ, ಅಲ್ಲಿನ ಅಧಿಕಾರಿಗಳು ಮೊದಲು ಪ್ರಕರಣ ದಾಖಲಿಸಿಕೊಳ್ಳಲು ನಿರಾಕರಿಸಿದ್ದಾರೆ ಎಂಬ ಗಂಭೀರ ಆರೋಪ ಕೇಳಿಬಂದಿದೆ. ಈ ಹಿನ್ನೆಲೆಯಲ್ಲಿ ಕರ್ತವ್ಯ ಲೋಪ ಎಸಗಿದ ಇಬ್ಬರು ಅಧಿಕಾರಿಗಳ ವಿರುದ್ಧ ಇಲಾಖಾ ವಿಚಾರಣೆಗೆ ಹಿರಿಯ ಅಧಿಕಾರಿಗಳು ಆದೇಶಿಸಿದ್ದಾರೆ. ತೀವ್ರ ಒತ್ತಡದ ನಂತರ ಪೊಲೀಸರು ಆರೋಪಿಯನ್ನು ಬಂಧಿಸಿದ್ದಾರೆ. ಇನ್ನೊಂದೆಡೆ, ಆರೋಪಿಯ ಸಹೋದರ ಮಸೂದ್ ಮಲ್ಲಿಕ್ ಈ ಆರೋಪಗಳನ್ನು ನಿರಾಕರಿಸಿದ್ದಾರೆ. ಶಾಲಾ ಸಮಾರಂಭವಾದ್ದರಿಂದ ನಾವು ಜಾತ್ಯತೀತ ಹಾಡುಗಳನ್ನು ಹಾಡುವಂತೆ ವಿನಂತಿಸಿದ್ದೆವು. ಗಾಯಕಿ ಕಾರ್ಯಕ್ರಮ ವಿಳಂಬವಾಗಿದ್ದಕ್ಕೆ ಹೆಚ್ಚಿನ ಹಣ ಕೇಳಿದ್ದರು, ನಾವು ನಿರಾಕರಿಸಿದ್ದಕ್ಕೆ ಸುಳ್ಳು ದೂರು ನೀಡಿದ್ದಾರೆ ಎಂದು ಪ್ರತ್ಯಾರೋಪ ಮಾಡಿದ್ದಾರೆ.

ಈ ಘಟನೆಯು ರಾಜಕೀಯ ಸ್ವರೂಪ ಪಡೆದುಕೊಂಡಿದ್ದು, ಬಿಜೆಪಿ ನಾಯಕ ಶಂಕುದೇವ್ ಪಾಂಡಾ ಪಶ್ಚಿಮ ಬಂಗಾಳ ಸರ್ಕಾರದ ವಿರುದ್ಧ ವಾಗ್ದಾಳಿ ನಡೆಸಿದ್ದಾರೆ. ರಾಜ್ಯವು ಜಿಹಾದಿಗಳ ಕೈಯಲ್ಲಿದೆ, ಹಿಂದೂ ವಿರೋಧಿ ಧೋರಣೆಯಿಂದಾಗಿ ಗಾಯಕಿಗೆ ಯಾವ ಹಾಡು ಹಾಡಬೇಕು ಎಂದು ನಿರ್ದೇಶಿಸಲಾಗುತ್ತಿದೆ ಎಂದು ಬಿಜೆಪಿ ಆರೋಪಿಸಿದೆ. ಈ ಕುರಿತು TMC ಇನ್ನು ಯಾವುದೇ ಅಧಿಕೃತ ಪ್ರತಿಕ್ರಿಯೆ ನೀಡಿಲ್ಲ.

# ಅಪ್ರಾಪ್ತೆ ಮೇಲೆ ಅತ್ಯಾಚಾರ ಕೇಸ್; ರಾಯಬಾಗದ ಕಾಮುಕ ಸ್ವಾಮಿಗೆ 35 ವರ್ಷ ಜೈಲು

**ಚಿಕ್ಕೋಡಿ:** ಮಠಕ್ಕೆ ಬಂದ ಭಕ್ತೆಯನ್ನು ಸ್ವಾಮೀಜಿಯೋರ್ವ ತನ್ನ ಕಾರಿನಲ್ಲಿ ಕರೆದೊಯ್ದು ಅತ್ಯಾಚಾರ ಎಸಗಿದ್ದ ಪ್ರಕರಣ ಸಾಬೀತಾಗಿದ್ದು, ಆರೋಪಿಗೆ 35 ವರ್ಷಗಳ ಕಠಿಣ ಕಾರಾಗೃಹ ಶಿಕ್ಷೆ ಹಾಗೂ ಒಂದು ಲಕ್ಷ ರೂ. ದಂಡ ವಿಧಿಸಿ ಬೆಳಗಾವಿ ಪೋಕ್ಸೊ ನ್ಯಾಯಾಲಯ ಮಹತ್ವದ ಆದೇಶ ನೀಡಿದೆ. ರಾಯಬಾಗ ತಾಲೂಕಿನ ಮೇಖಳಿ ಗ್ರಾಮದ ರಾಮಮಂದಿರ ಮಠದ ಲೋಕೇಶ್ವರ ಸ್ವಾಮೀಜಿ ಮಠಕ್ಕೆ ಬಂದಿದ್ದ ಅಪ್ರಾಪ್ತ ಬಾಲಕಿಯನ್ನು ಪುಸಲಾಯಿಸಿ ತನ್ನ ಕಾರಿನಲ್ಲಿ ಕರೆದೊಯ್ದಿದ್ದ. ನಂತರ ರಾಯಚೂರು, ಬಾಗಲಕೋಟೆ ಸೇರಿದಂತೆ ಸ್ಥಳಗಳಲ್ಲಿ ಸುತ್ತಾಡಿಸಿ ಅತ್ಯಾಚಾರ ಎಸಗಿ ಕೊನೆಗೆ ಬಾಗಲಕೋಟೆ ಜಿಲ್ಲೆಯ ಮಹಾಲಿಂಗಪುರ ಬಸ್ ನಿಲ್ದಾಣದಲ್ಲಿ ಬಿಟ್ಟು ಪರಾರಿಯಾಗಿದ್ದ. ಈ ಕುರಿತು ಅಪ್ರಾಪ್ತ ಬಾಲಕಿ ಕುಟುಂಬದವರು ಬಾಗಲಕೋಟೆ ಮಹಿಳಾ ಠಾಣೆಯಲ್ಲಿ ಆರೋಪಿ ವಿರುದ್ಧ ಪ್ರಕರಣ ದಾಖಲಿಸಿದ್ದರು.ತದನಂತರ ಬೆಳಗಾವಿ ಜಿಲ್ಲೆಯ ಮೂಡಲಗಿ ಪೊಲೀಸ್ ಠಾಣೆಗೆ ಪ್ರಕರಣ ವರ್ಗಾವಣೆ ಮಾಡಿ ಅತ್ಯಾಚಾರ ಆರೋಪಿ ಸ್ವಾಮಿಯನ್ನು ಪೊಲೀಸರು ವಶಕ್ಕೆ ಪಡೆದು ತನಿಖೆ ಕೈಗೊಂಡಿದ್ದರು.





**ಸುದ್ದಿ ಹಾಗೂ ಜಾಹೀರಾತುಗಳಿಗೆ ಸಂಪರ್ಕಿಸಿ :9538786812/988065534**

Printed by: R Ramesh, Published by Abhishek D R On Behalf of Abhishek D R, Printed at Maruthi Enterprises. No.1159, Near Floor Mill, D Cross, Doddaballapura Town, Bengaluru rural, Karnataka - 561203, Published at No. 3769/1, Rajarathna Nivasa, KSRTC Layout, Near Ambedkar Stadium, Rayan Nagara, Nelamangala. Editor Abhishek D R.